18 September 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 274 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

ಭಾವನಾಂತರಂಗ

ಹಾವು ವಿಷ ಜಂತುವಾದರೂ ತನ್ನ ಸಂತತಿಗೆ ಕಂಟಕವಲ್ಲ! ಆದರೆ ಮನುಷ್ಯ ಮತ್ಸರದಿಂದ ತನ್ನ ಆತ್ಮೀಯರಿಗೆ ಸಂಕಟ ತರುತ್ತಾನೆ!

-ಸ್ನೇಹಾ ಆನಂದ್

info.varthaman@gmail.com

ಪತ್ರಕರ್ತ ಕೆ.ದೀಪಕ್‌ಗೆ ಬಾಬಾ ಸಾಹೇಬ ಅಂಬೇಡ್ಕರ್ ಪ್ರಶಸ್ತಿ ಪ್ರದಾನ ಪುಟ ಸಂ. 2

ಪಕೋಡ ಮಾರಿ ಮೋದಿ ಹುಟ್ಟುಹಬ್ಬ ಆಚರಿಸಿದ ಯುವ ಕಾಂಗ್ರೆಸ್ ಪುಟ ಸಂ. 3

ಬಿಜೆಪಿಯಿಂದ ಚಾಮರಾಜೇಶ್ವರಸ್ವಾಮಿಗೆ ವಿಶೇಷಪೂಜೆ ಪುಟ ಸಂ. 4

ಎಲ್ಲರಿಗೂ ಗುಣಮಟ್ಟದ ಶಿಕ್ಷಣ

ಶಿಕ್ಷಣ ಸಚಿವ ಮಧು ಬಂಗಾರಪ್ಪ ಅಭಿಪ್ರಾಯ

ಮೈಸೂರು: ಎಲ್ಲರಿಗೂ ಗುಣಮಟ್ಟದ ಶಿಕ್ಷಣ ದೊರೆಯುವುದು ಅವಶ್ಯಕ. ದೇವಸ್ಥಾನದ ಗಂಟೆ ಹೊಡೆಯದಿದ್ದರೂ ಪರವಾಗಿಲ್ಲ. ಆದರೆ ಶಾಲೆಗಳ ಗಂಟೆ ಹೊಡೆದರೆ ಮಕ್ಕಳು ಉದ್ಧಾರವಾಗುತ್ತಾರೆ. ಈ ಮೂಲಕ ದೇಶ ಉದ್ಧಾರವಾಗುತ್ತದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಅಭಿಪ್ರಾಯಪಟ್ಟರು.

ನಗರದ ಕೆ.ಎಚ್.ಬಿ.ಐ. ಬಡಾವಣೆಯಲ್ಲಿ ಗುರುವಾರ ಜೆಎಸ್‌ಎಸ್ ಪದವಿ ಪೂರ್ವ ಕಾಲೇಜಿನ ನೂತನ ಕಟ್ಟಡ ಹಾಗೂ ಶ್ರೀ ಘನ ಲಿಂಗ ಶಿವಯೋಗಿ ಸಭಾಭವನ ಉದ್ಘಾಟಿಸಿ ಮಾತನಾಡಿದರು. ಮಕ್ಕಳ ಕೆಲಸವೆಂದರೆ ದೇವರ ಕೆಲಸ ಎಂಬ ಕಾರಣಕ್ಕೇ ಮತ್ತೆ ಶಿಕ್ಷಣ ಖಾತೆ ಆಯ್ಕೆ ಮಾಡಿಕೊಂಡಿದ್ದೇನೆ ಎಂದು ಹೇಳಿದರು.

ಅನ್ನದಾಸೋಹ ಮತ್ತು ಅಕ್ಷರ ದಾಸೋಹದ ಮೂಲಕ ರಾಜ್ಯದ ಬಡ ಜನರ ಮಕ್ಕಳಿಗೆ ಆಶ್ರಯ ತಾಣ ಒದಗಿಸುತ್ತಿರುವ ಜೆಎಸ್‌ಎಸ್ ಸಂಸ್ಥೆ ಕಾರ್ಯ ನಿಜಕ್ಕೂ ಶ್ರೇಷ್ಠವಾದುದು. ಜೆಎಸ್‌ಎಸ್ ಮಹಾವಿದ್ಯಾಪೀಠ ಪೂರ್ವ ಪ್ರಾಥಮಿಕ ಶಿಕ್ಷಣದಿಂದ ಉನ್ನತ ಶಿಕ್ಷಣದವರೆಗೆ 386 ಶಿಕ್ಷಣ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. ಒಂದು ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಇಲ್ಲಿ ಶಿಕ್ಷಣ ಪಡೆಯುತ್ತಿರುವುದು ಸಂಸ್ಥೆಗೆ ಕಿರೀಟಪ್ರಾಯವಾಗಿದೆ ಎಂದರು.

ಕರ್ನಾಟಕ ಮಾತ್ರವಲ್ಲದೆ ತಮಿಳುನಾಡು, ಉತ್ತರ ಪ್ರದೇಶ, ದೆಹಲಿ ಸೇರಿದಂತೆ ದೇಶದ ವಿವಿಧೆಡೆ ಹಾಗೂ ದುಬೈ ಮತ್ತು ಮಾರಿಷಸ್‌ನಲ್ಲಿಯೂ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿರುವುದು ಪುಟ 2ಕ್ಕೆ

ತುಮಕೂರಿಗೆ ಎತ್ತಿನಹೊಳೆ ನೀರು

ಕಾಮಗಾರಿಗೆ ಚುರುಕು ಮುಟ್ಟಿಸಿದ ಸಚಿವ ಚಲುವರಾಯಸ್ವಾಮಿ

ತುಮಕೂರು: ಎತ್ತಿನಹೊಳೆ ಯೋಜನೆ ಮೂಲಕ ತುಮಕೂರು ಜಿಲ್ಲೆಗೆ ನವೆಂಬರ್ ಅಂತ್ಯದೊಳಗೆ ನೀರು ಹರಿಸಲು ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ಪಣತೊಟ್ಟಿದ್ದಾರೆ.

ಗುಬ್ಬಿ ತಾಲೂಕಿನ ಕಂಚಿಗಾನಹಳ್ಳಿಯಲ್ಲಿ ನಡೆಯುತ್ತಿರುವ ಎತ್ತಿನಹೊಳೆ ಯೋಜನೆಯ 'ಪ್ಯಾಕೇಜ್ 11'ರ ಕಾಮಗಾರಿ ಸ್ಥಳಕ್ಕೆ ಗುರುವಾರ ಭೇಟಿ ನೀಡಿ ಸಮಗ್ರ ಪರಿಶೀಲನೆ ನಡೆಸಿದರು. ಯೋಜನೆಯನ್ನು ಶೀಘ್ರ ಮುಕ್ತಾಯಗೊಳಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಕಾಮಗಾರಿ ಸ್ಥಳದಲ್ಲಿ ಎದುರಾಗಿರುವ ಆಡಳಿತಾತ್ಮಕ ತೊಡಕುಗಳನ್ನು ನಿವಾರಿಸಲು ಸಚಿವರು ತ್ವರಿತ ಹೆಜ್ಜೆ ಇಟ್ಟಿದ್ದಾರೆ. ಕಂಚಿಗಾನಹಳ್ಳಿಯ ಅರಣ್ಯ ಇಲಾಖೆಗೆ ಸೇರಿದ 1.9 ಕಿ.ಮೀ ಜಾಗವನ್ನು ಪರಿಶೀಲಿಸಿದ ಅವರು, ಯೋಜನೆಗೆ ಅಗತ್ಯವಿರುವ ಅರಣ್ಯ ಇಲಾಖೆಯ 2ನೇ ಹಂತದ (ಸ್ಟೇಜ್ 2) ಅನುಮತಿಗೆ ಸಂಬಂಧಿಸಿದ ಕಡತಗಳು ಈಗಾಗಲೇ ನವದೆಹಲಿಗೆ ತಲುಪಿವೆ ಎಂದು ಸ್ಪಷ್ಟಪಡಿಸಿದರು.

ಗುರುತ್ವಾಕರ್ಷಣಾ ಕಾಲುವೆ (ಗ್ರಾವಿಟಿ ಕೆನಾಲ್) ನಿರ್ಮಾಣದಲ್ಲಿ ಗುಣಮಟ್ಟಕ್ಕೆ ಅತ್ಯುನ್ನತ ಆದ್ಯತೆ ನೀಡಬೇಕು ಪುಟ 2ಕ್ಕೆ

ನನ್ನ ಮಾತು ಎಷ್ಟು ನಡೆಯುತ್ತೇ? ಅನ್ನೋದು ನನಗೆ ಮಾತ್ರ ಗೊತ್ತು!

ಸರ್ಕಾರದಲ್ಲಿ ನಿರ್ಲಕ್ಷ್ಯ: ಮಾಜಿ ಸಿಎಂ ಸಿದ್ದರಾಮಯ್ಯ ಅಸಮಾಧಾನ

ಬೆಂಗಳೂರು: ನಾನೀಗ ಮುಖ್ಯಮಂತ್ರಿಯೂ ಅಲ್ಲ. ನನ್ನ ಮಾತು ಎಷ್ಟು ನಡೆಯುತ್ತದೆ? ಎಷ್ಟು ನಡೆಯಲ್ಲ ಅನ್ನೋದು ನನಗೆ ಮಾತ್ರ ಗೊತ್ತು! ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾರ್ಮಿಕವಾಗಿ ಹೇಳಿದರು.

ವಿಧಾನಸೌಧದ ಸಿಎಲ್‌ಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ನಾನು ಮುಖ್ಯಮಂತ್ರಿ ಅಲ್ಲದಿದ್ದರೂ ನನ್ನ ಮಾತು ನಡೆಯುತ್ತದೆ ಅಂತ ಬಹಳ ಜನ ಅನ್ಕೊಂಡಿದ್ದಾರೆ. ನಾನೂ ಹಾಗೇ ಅನ್ಕೊಂಡಿದ್ದೇನೆ. ಆದರೆ ನನ್ನ ಮಾತು ಎಷ್ಟು ನಡೆಯುತ್ತದೆ, ಎಷ್ಟು ನಡೆಯಲ್ಲ ಅಂತ ನನಗೆ ಮಾತ್ರ ಗೊತ್ತು ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕೇಂದ್ರ ಎಸ್‌ಸಿಪಿ–ಟಿಎಸ್‌ಪಿ ಕಾಯ್ದೆ ಏಕೆ ಜಾರಿ ಮಾಡಿಲ್ಲ?

ಎಸ್‌ಸಿಎಸ್‌ಪಿ– ಟಿಎಸ್‌ಪಿ ಕಾಯ್ದೆಯನ್ನ ಕೇಂದ್ರ ಸರ್ಕಾರ ಯಾಕೆ ಜಾರಿ ಮಾಡಿಲ್ಲ? ಬಿಜೆಪಿಗೆ ವೋಟು ಕೊಟ್ಟು ಜನ ಕಳಿಸಿದ್ದಾರಲ್ಲಾ, ಬಹಳ ಜನ ಹುಡುಗರು ಮೋದಿ ಮೋದಿ ಅಂತಿದ್ದರು. ಆದೆ ಈಗ ಸೈಲೆಂಟ್ ಆಗಿದ್ದಾರೆ ಎಂದು ಮಾಜಿ ಸಿಎಂ ಸಿದ್ದರಾಮಯ್ಯ ಕುಟುಕಿದರು. ಪ್ರಧಾನಿ ಮೋದಿ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಪ್ರಜಾಪ್ರಭುತ್ವದ ವಿರೋಧಿಗಳಿಂದ ಸಂವಿಧಾನ ಶ್ರೇಷ್ಠವಾಗಲ್ಲ. ಸ್ವಾತಂತ್ರ್ಯ ಬಂದು 80 ವರ್ಷ ಆದರೂ ಸಂವಿಧಾನದ ಆಶಯಗಳು ಈಡೇರಿಲ್ಲ. ಪ್ರಜಾಪ್ರಭುತ್ವ ಧ್ವಂಸ ಮಾಡೋರ ಜೊತೆಗೆ ಹೋಗಬಾರದು. ಮನುವಾದಿಗಳಿಂದ ಬದಲಾವಣೆ ಆಗೋದಿಲ್ಲ. ಮನುವಾದಿ ಗಳ ಜೊತೆ ನೀವು ಹೋದರೆ ನಿಮಗೆ ಒಂದು ಸ್ಥಾನಮಾನ ಸಿಗಬಹುದು. ಆದರೆ ಸಮಾಜದಲ್ಲಿ ಬದಲಾವಣೆ ಆಗಲ್ಲ. ಸಮಾಜದಲ್ಲಿ ಜಾತಿ ವ್ಯವಸ್ಥೆ ಜೀವಂತ ಇದೆ. ನಾವು ಶೂದ್ರ ವರ್ಗದ ಜನ, ಬದಲಾವಣೆ ದಾರಿಯಲ್ಲಿ ನಡೆಯಬೇಕು ಎಂದು ಕರೆ ನೀಡಿದರು. ನರೇಂದ್ರ ಮೋದಿ ಪ್ರಧಾನಿಯಾಗಬೇಕಾದರೂ ಸಂವಿಧಾನವೇ ಕಾರಣ. ಆದರೆ ಜಾತಿ ವ್ಯವಸ್ಥೆ ಬದಲಾವಣೆ ಆಗಬಾರದು ಅಂತ ಕೆಲವರು ಇದ್ದಾರೆ. ನಾನು 8 ವರ್ಷ ಸಿಎಂ ಆಗಿದ್ದಾಗ ಬದಲಾವಣೆಗೆ ಪ್ರಯತ್ನ ಪಟ್ಟಿದ್ದೇನೆ.

ಬೆಂಗಳೂರಿನಲ್ಲಿ ಎಐಸಿಸಿ ನಾಯಕರ ಜೊತೆ ಸಿದ್ದರಾಮಯ್ಯ ಅವರು, ಪ್ರತ್ಯೇಕ ಮಾತುಕತೆ ನಡೆಸಿದ್ದರು. ಈ ಬೆನ್ನಲ್ಲೇ ಪುಟ 2ಕ್ಕೆ

ಇನ್ನೂ 23 ತಾಲೂಕು ಬರಪೀಡಿತ

ಮುಂಗಾರು ವಿಫಲ: ಬರ ಪಟ್ಟಿಗೆ ಹೆಚ್ಚುವರಿ ತಾಲೂಕುಗಳ ಸೇರ್ಪಡೆ

ಬೆಂಗಳೂರು: ರಾಜ್ಯದಲ್ಲಿ ಮುಂಗಾರು ಮಳೆ ಕೊರತೆಯಿಂದ ಸಂಕಷ್ಟ ಎದುರಿಸುತ್ತಿರುವ ರೈತರಿಗೆ ನೆರವಾಗಲು ಸರ್ಕಾರ ಮತ್ತೊಂದು ಮಹತ್ವದ ನಿರ್ಧಾರ ಕೈಗೊಂಡಿದೆ. ರಾಜ್ಯದ ಇನ್ನೂ 23 ತಾಲೂಕುಗಳನ್ನು ಬರಪೀಡಿತ ಎಂದು ಸರ್ಕಾರ ಅಧಿಕೃತವಾಗಿ ಘೋಷಿಸಿದೆ.

ಮೊದಲ ಹಂತದಲ್ಲಿ ಆಗಸ್ಟ್ 27ರ ಅಧಿಸೂಚನೆಯಲ್ಲಿ 101 ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಲಾಗಿತ್ತು. ನಂತರ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರವು ಉಳಿದ 139 ತಾಲೂಕುಗಳಲ್ಲಿ ವೈಜ್ಞಾನಿಕ ಅಧ್ಯಯನ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಿತ್ತು. ಈ ಸಮಗ್ರ ವರದಿ ಹಾಗೂ ಗ್ರೌಂಡ್ ಟ್ರೂಥಿಂಗ್ (ಸ್ಥಳ ಪರಿಶೀಲನೆ) ಪ್ರಕ್ರಿಯೆಯ ಆಧಾರದ ಮೇಲೆ ಸರ್ಕಾರ ಹೊಸದಾಗಿ 23 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದೆ.

ಈ 23 ತಾಲೂಕುಗಳ ಪೈಕಿ 21 ತಾಲೂಕುಗಳನ್ನು ತೀವ್ರ ಬರಪೀಡಿತ ಹಾಗೂ 2 ತಾಲೂಕುಗಳನ್ನು ಸಾಧಾರಣ ಬರಪೀಡಿತ ಎಂದು ವರ್ಗೀಕರಿಸಲಾಗಿದೆ. ಈ ಆದೇಶ ತಕ್ಷಣದಿಂದಲೇ ಜಾರಿಗೆ ಬರಲಿದೆ. ಮುಂದಿನ ಆರು ತಿಂಗಳ ಅವಧಿಯವರೆಗೆ ಅನ್ವಯವಾಗಲಿದೆ.

ತೀವ್ರ ಬರಪೀಡಿತ ತಾಲೂಕುಗಳು

ತುಮಕೂರು ಜಿಲ್ಲೆಯ ತಿಪಟೂರು; ಕೊಪ್ಪಳ ಜಿಲ್ಲೆಯ ಕಾರಟಗಿ; ರಾಯಚೂರು ಜಿಲ್ಲೆಯ ಮಾನ್ವಿ, ಸಿಂಧನೂರು ಮತ್ತು ಸಿರವಾರ; ಕಲಬುರಗಿ ಜಿಲ್ಲೆಯ ಅಫಜಲಪುರ, ಆಳಂದ, ಚಿತ್ತಾಪುರ, ಕಲಬುರಗಿ, ಯಡ್ರಾಮಿ ಮತ್ತು ಶಹಾಬಾದ್; ಬೀದರ್ ಜಿಲ್ಲೆಯ ಭಾಲ್ಕಿ; ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ, ಬಬಲೇಶ್ವರ ಮತ್ತು ತಿಕೋಟಾ; ಹಾವೇರಿ ಜಿಲ್ಲೆಯ ರಟ್ಟಿಹಳ್ಳಿ; ಧಾರವಾಡ ಜಿಲ್ಲೆಯ ಹುಬ್ಬಳ್ಳಿ, ನವಲಗುಂದ, ಹುಬ್ಬಳ್ಳಿ ನಗರ ಮತ್ತು ಅಣ್ಣಿಗೇರಿ; ಚಿಕ್ಕಮಗಳೂರು ಜಿಲ್ಲೆಯ ಕಡೂರು. ಕೊಡಗು ಜಿಲ್ಲೆಯ ಪೊನ್ನಂಪೇಟೆ ಮತ್ತು ವಿರಾಜಪೇಟೆ.

ಪರಿಹಾರ ಕಾರ್ಯಕ್ಕೆ ಸೂಚನೆ

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರಗಳ ಅಧ್ಯಕ್ಷರಾಗಿರುವ ಜಿಲ್ಲಾಧಿಕಾರಿಗಳಿಗೆ ರಾಜ್ಯ ವಿಪತ್ತು ಸ್ಪಂದನಾ ನಿಧಿ ಮಾರ್ಗಸೂಚಿಗಳಂತೆ ಘೋಷಿತ ತಾಲೂಕುಗಳಲ್ಲಿ ಅಗತ್ಯ ಪರಿಹಾರ ಮತ್ತು ಸ್ಪಂದನ ಕ್ರಮಗಳನ್ನು ಕೈಗೊಳ್ಳಲು ಅಧಿಕಾರ ನೀಡಲಾಗಿದೆ. ಕೃಷಿ ಆಯುಕ್ತರು, ತೋಟಗಾರಿಕೆ ನಿರ್ದೇಶಕರು ಮತ್ತು ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಜಂಟಿಯಾಗಿ ಬೆಳೆ ಹಾನಿ ಸಮೀಕ್ಷೆ ನಡೆಸಿ, ಪರಿಹಾರ ವರದಿಯನ್ನು ತಕ್ಷಣವೇ ಸರ್ಕಾರಕ್ಕೆ ಸಲ್ಲಿಸುವಂತೆ ಸೂಚಿಸಲಾಗಿದೆ. ಸೆಪ್ಟೆಂಬರ್ ತಿಂಗಳಿನಲ್ಲಿಯೂ ವಾಡಿಕೆಗಿಂತ ಕಡಿಮೆ ಮಳೆಯಾಗುವ ಮುನ್ಸೂಚನೆ ಇರುವುದರಿಂದ ವಾರಕ್ಕೊಮ್ಮೆ ಬರ ಪರಿಸ್ಥಿತಿಯನ್ನು ಪುಟ 2ಕ್ಕೆ

ಸಿದ್ದರಾಮಯ್ಯ ಪ್ರತಿಮೆ ತೆರವು

ಕಲಬುರಗಿ: ನಗರದ ಹೈಕೋರ್ಟ್ ಕ್ರಾಸ್ ಬಳಿ ರಾತ್ರೋ ರಾತ್ರಿ ಗುಂಪೊಂದು ಮಾಜಿ ಸಿಎಂ ಸಿದ್ದರಾಮಯ್ಯ ಪ್ರತಿಮೆಯನ್ನು ಸ್ಥಾಪನೆ ಮಾಡಿತ್ತು. ಅದನ್ನು ಮಹಾನಗರ ಪಾಲಿಕೆ ಸಿಬ್ಬಂದಿ ಗುರುವಾರ ತೆರವು ಮಾಡಿದರು.

ಯಾವುದೇ ಅನುಮತಿ ಪಡೆಯದೆ ಏಳೆಂಟು ಜನರ ಗುಂಪು ಸೆ.16ರಂದು ರಾತ್ರೋ ರಾತ್ರಿ ಪ್ರತಿಮೆಯನ್ನು ಸ್ಥಾಪನೆ ಮಾಡಿದ್ದಾರೆ. 2–3 ವರ್ಷಗಳ ಹಿಂದೆ ನಗರದಲ್ಲಿ ರಾತ್ರೋ ರಾತ್ರಿ ಸಿದ್ದರಾಮಯ್ಯ ಭಾವಚಿತ್ರದ ಪುಟ 2ಕ್ಕೆ

ಶಿಕ್ಷಕರ ಕೊರತೆ ಪರಿಹರಿಸದಿದ್ದರೆ ಶಾಲಾ–ಕಾಲೇಜು ಬಂದ್: ಹೊರಟ್ಟಿ

ಹುಬ್ಬಳ್ಳಿ: ಶಿಕ್ಷಕರ ಕೊರತೆ ಸೇರಿ ಇನ್ನಿತರ ಸಮಸ್ಯೆಗಳಿಂದಾಗಿ ಅನುದಾನಿತ ಶಾಲೆ, ಕಾಲೇಜುಗಳು ಮುಚ್ಚುವ ಹಂತದಲ್ಲಿವೆ. ಕೂಡಲೇ ಸಮಸ್ಯೆ ಪರಿಹರಿಸದಿದ್ದರೆ ನವೆಂಬರ್ 3ರಿಂದ ಉತ್ತರ ಕರ್ನಾಟಕ ಭಾಗದಲ್ಲಿ ಅನಿರ್ದಿಷ್ಟಾವಧಿವರೆಗೆ ಶಾಲೆ, ಕಾಲೇಜುಗಳನ್ನು ಬಂದ್ ಮಾಡಿ ಹೋರಾಟ ಮಾಲಾಗುವುದು ಎಂದು ವಿಧಾನ ಪರಿಷತ್ ಸದಸ್ಯ ಬಸವರಾಜ ಹೊರಟ್ಟಿ ಹೇಳಿದರು.

ಹಲವು ವರ್ಷಗಳಿಂದ ಶಿಕ್ಷಕರ ನೇಮಕಾತಿ ಆಗಿಲ್ಲ. ಸರ್ಕಾರಿ, ಅನುದಾನಿತ ಶಾಲೆಗಳಲ್ಲಿ 29 ಸಾವಿರಕ್ಕೂ ಹೆಚ್ಚು ಶಿಕ್ಷಕ ಹುದ್ದೆಗಳು ಖಾಲಿ ಇವೆ. ಕೂಡಲೇ ಇವುಗಳ ಭರ್ತಿಗೆ ಕ್ರಮ ಕೈಗೊಳ್ಳಬೇಕು ಎಂದು ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಆಗ್ರಹಿಸಿದರು.

ಶಿಕ್ಷಕರ ನೇಮಕಾತಿಗೆ ಸರ್ಕಾರದಲ್ಲಿ ಹಣ ಇಲ್ಲ. ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಹೆಚ್ಚು ಗಮನ ಹರಿಸಲಾಗುತ್ತಿದೆಯೇ ಹೊರತು ಸರ್ಕಾರಿ ಶಾಲೆಗಳ ಬಲವರ್ಧನೆಗೆ ಆಸಕ್ತಿ ತೋರುತ್ತಿಲ್ಲ ಎಂದು ಆರೋಪಿಸಿದರು.

2006ರ ಪೂ.1ಕ್ಕೂ ಮುನ್ನ ನೇಮಕಾತಿಯಾಗಿ ನಂತರ ಅನುದಾನಕ್ಕೊಳಪಟ್ಟ ಅನುದಾನಿತ ಶಾಲಾ ನೌಕರರು ಮತ್ತು ಸರ್ಕಾರಿ ನೌಕರರಿಗೆ ಹಳೆ ಪಿಂಚಣಿ ಯೋಜನೆ ಸೌಲಭ್ಯ ನೀಡಬೇಕು. ಅನುದಾನಿತ ಶಾಲಾ ನೌಕರರಿಗೆ ಕಾಲ್ಪನಿಕ ವೇತನ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.



ಕರ್ನಾಟಕ ಪಬ್ಲಿಕ್ ಶಾಲೆಗಳ (ಕೆಪಿಎಸ್) ಪರಿಕಲ್ಪನೆ ಉತ್ತಮವಾಗಿದೆ. ಒಂದೇ ಕಡೆ ನರ್ಸರಿಯಿಂದ ಪಿಯುವರೆಗೆ ಶಿಕ್ಷಣ ಸಿಗಬೇಕು. ಒಬ್ಬರೇ ಪ್ರಾಂಶುಪಾಲರಿರಬೇಕು ಎಂಬುದು ನಿಯಮ. ಆದರೆ, ಇದು ಸಮರ್ಪಕವಾಗಿ ಅನುಷ್ಠಾನವಾಗುತ್ತಿಲ್ಲ. ಅಲ್ಲದೆ, ಅನುದಾನಿತ ಶಾಲೆಗಳು ಉತ್ತಮ ಸೌಲಭ್ಯ ಹೊಂದಿದ್ದು, ಇವುಗಳ ಸಮೀಪ ಹೊಸದಾಗಿ ಕೆಪಿಎಸ್ ಮತ್ತು ಪಿ.ಎಂ.ಶ್ರೀ ಶಾಲೆಗಳನ್ನು ತೆರೆಯಬಾರದು ಎಂದರು.

ನನ್ನ ತಂಟೆಗೆ ಬಂದ್ರೆ ಸುಮ್ಮನೆ ಬಿಡಲ್ಲ!

ಜನಾರ್ದನ ರೆಡ್ಡಿಗೆ ಸಚಿವ ತಂಗಡಗಿ ಎಚ್ಚರಿಕೆ

ಬೆಂಗಳೂರು: ಜನಾರ್ದನ ರೆಡ್ಡಿ ನನ್ನನ್ನು ಏಕವಚನದಲ್ಲಿ ಮಾತನಾಡಿದ್ದು ಹಾಗೂ ನಾನು ಸಹಾಯ ಪಡೆದಿದ್ದೇನೆ ಎಂದಿದ್ದಕ್ಕೆ ತಕ್ಕ ಉತ್ತರ ಕೊಟ್ಟಿದ್ದೇನೆ. ನಾನು ಯಾರ ತಂಟೆಗೂ ಹೋಗಲ್ಲ. ನನ್ನ ತಂಟೆಗೆ ಬಂದರೆ ಸುಮ್ಮನೆ ಬಿಡುವುದಿಲ್ಲ ಪುಟ 2ಕ್ಕೆ



ಇನ್ಸ್‌ಪೆಕ್ಟರ್ ವಿವಾದ: ಖಾಸಗಿ ವಾಹಿನಿ ವಿರುದ್ಧವೇ ಪ್ರಕರಣ

ಮೈಸೂರು: ಟಿ.ನರಸೀಪುರ ಠಾಣೆ ಇನ್ಸ್ಪೆಕ್ಟರ್ ಧನಂಜಯ್ ಹೇಳಿಕೆ ತಿರುಚಿದ ಆರೋಪದಡಿ ಸ್ಥಳೀಯ ಖಾಸಗಿ ವಾಹಿನಿ ಎಡಿಟರ್ ಮಂಜುನಾಥ್ ವಿರುದ್ಧ ಟಿ.ನರಸೀಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಗೌರಿ–ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಆಯೋಜಿಸಲಾಗಿದ್ದ ಶಾಂತಿ ಸಭೆಯಲ್ಲಿ ಪೊಲೀಸ್ ನಿರೀಕ್ಷಕರು ನೀಡಿದ ಎಚ್ಚರಿಕೆ ಏಡಿಯೋವನ್ನು ತಿರುಚಿ ಸಾರ್ವಜನಿಕರಲ್ಲಿ ಭೀತಿ ಮತ್ತು ಕೋಮು ವೈಷಮ್ಯ ಸೃಷ್ಟಿಸಲು ಯತ್ನಿಸಿದ್ದಾರೆ ಎಂದು ಆರೋಪಿಸಿ ಟಿ.ನರಸೀಪುರ ಕಾನ್‌ಸ್ಟೇಬಲ್ ಯಶವಂತ್ ದೂರು ನೀಡಿದ್ದಾರೆ.

ಈ ದೂರಿನ ಅನ್ವಯ ಬಿಎನ್‌ಎಸ್ ಸೆಕ್ಷನ್ 353(1)(ಬಿ)(ಎಲೆಕ್ಟ್ರಾನಿಕ್ ಸಾಧನಗಳು ಅಥವಾ

ಸಾಮಾಜಿಕ ಮಾಧ್ಯಮಗಳ ಮೂಲಕ (ಡಿಜಿಟಲ್ ವಿಧಾನಗಳು) ಸಾರ್ವಜನಿಕರಲ್ಲಿ ಕಿಡಿಗೇಡಿತನ, ಭಯ ಅಥವಾ ಆತಂಕವನ್ನುಂಟುಮಾಡುವ ಸುಳ್ಳು ಮಾಹಿತಿ, ವದಂತಿ ಅಥವಾ ವರದಿಗಳನ್ನು ಪ್ರಕಟಿಸುವುದು ಅಥವಾ ಪ್ರಸಾರ ಮಾಡುವುದು), 353(1)(ಸಿ) (ಯಾವುದೇ ಧರ್ಮ, ಜಾತಿ, ಭಾಷೆ ಅಥವಾ ಪುಟ 2ಕ್ಕೆ

ಪಡಿತರ ಕಾರ್ಡ್ ಇ–ಕೆವೈಸಿ ಗಡುವು ವಿಸ್ತರಣೆ: ರಿಜ್ವಾನ್

ಬೆಂಗಳೂರು: ರೇಷನ್ ಕಾರ್ಡ್ ಇ–ಕೆವೈಸಿ ಮಾಡಿಸುವ ಗಡುವನ್ನು ಸರ್ಕಾರ ವಿಸ್ತರಣೆ ಮಾಡಿದೆ. ಅಕ್ಟೋಬರ್ 20ರ ವರೆಗೂ ಅವಧಿ ವಿಸ್ತರಣೆ ಮಾಡಿ ಆಹಾರ ಇಲಾಖೆ ಆದೇಶ ಹೊರಡಿಸಿದೆ.

ಸರ್ವರ್ ಸಮಸ್ಯೆಯಿಂದಾಗಿ ಇ–ಕೆವೈಸಿ ಪುಟ 2ಕ್ಕೆ

ನಾಪತ್ತೆ ಆಗಿದ್ದ ಕೆಪಿಎಸ್ಸಿ ಸದಸ್ಯೆ ಶಾಂತಾ ಸಿಐಡಿ ವಿಚಾರಣೆಗೆ ಹಾಜರು

ಬೆಂಗಳೂರು: ಕೆಪಿಎಸ್‌ಸಿ ಪಶುವೈದ್ಯಾಧಿಕಾರಿ ನೇಮಕಾತಿ ಪರೀಕ್ಷೆಯಲ್ಲಿ ಅಕ್ರಮ ಎಸಗಿದ ಪ್ರಕರಣಕ್ಕೆ ಸಂಬಂಧಿಸಿದಂತೆ ನಾಪತ್ತೆಯಾಗಿದ್ದ ಸದಸ್ಯೆ ಡಾ.ಶಾಂತಾ ಹೊಸಮನಿ ಕೊನೆಗೂ ಸಿಐಡಿ ಮುಂದೆ ಇಂದ

ಸರ್ವರಿಗೂ ಸಮಾನ ಅವಕಾಶ ಸಿಗಲಿ

ಎಸ್ಸಿ/ಎಸ್ಟಿ ಪತ್ರಿಕಾ ಸಂಪಾದಕರ ಸಂಘದ ಕಾರ್ಯಕ್ರಮದಲ್ಲಿ ಮಾಜಿ ಸಿಎಂ ಸಿದ್ದರಾಮಯ್ಯ ಆಶಯ.

ಪತ್ರಕರ್ತ ಕೆ.ದೀಪಕ್‌ಗೆ ಬಾಬಾ ಸಾಹೇಬ ಅಂಬೇಡ್ಕರ್ ಪ್ರಶಸ್ತಿ ಪ್ರದಾನ

ಬೆಂಗಳೂರು : ಪತ್ರಿಕಾರಂಗದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳು ಹಾಗೂ ಅಲ್ಪಸಂಖ್ಯಾತರಿಗೆ ಸಮಾನ ಅವಕಾಶಗಳು ದೊರೆಯಬೇಕು. ಈ ಸಮುದಾಯಗಳಿಗೆ ಬುದ್ಧಿ, ಪ್ರಾವೀಣ್ಯತೆ ಅಥವಾ ವ್ಯಕ್ತಿತ್ವದ ಕೊರತೆಯಿಲ್ಲ. ಐತಿಹಾಸಿಕವಾಗಿ ಅಕ್ಷರ ಸಂಸ್ಕೃತಿ ಮತ್ತು ಶಿಕ್ಷಣದ ಅವಕಾಶಗಳಿಂದ ವಂಚಿತರಾಗಿದ್ದ ಕಾರಣದಿಂದಾಗಿ ಪತ್ರಿಕಾರಂಗದಲ್ಲಿ ಅವರ ಸಂಖ್ಯೆ ಕಡಿಮೆಯಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ಕರ್ನಾಟಕ ರಾಜ್ಯ ಎಸ್ಸಿ, ಎಸ್ಟಿ ಪತ್ರಿಕಾ ಸಂಪಾದಕರ ಸಂಘದ ವತಿಯಿಂದ ಇಂದು ಆಯೋಜಿಸಿದ್ದ ಪ್ರಶಸ್ತಿ ಪ್ರದಾನ ಹಾಗೂ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರತಿವರ್ಷದಂತೆ ಈ ಬಾರಿಯೂ ಬಾಬಾಸಾಹೇಬ್ ಅಂಬೇಡ್ಕರ್, ಬಿ.ರಾಚಯ್ಯ, ಬಸವಲಿಂಗಪ್ಪ ಹಾಗೂ ಕೃಷ್ಣಪ್ಪ ಅವರ ಹೆಸರಿನಲ್ಲಿ ಪ್ರಶಸ್ತಿಗಳನ್ನು ನೀಡಿರುವುದು ಸಂತೋಷದ ವಿಚಾರ. ಪ್ರಶಸ್ತಿ ಪುರಸ್ಕೃತರೆಲ್ಲರಿಗೂ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ಬಾಬಾಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಎಸ್ಸಿ, ಎಸ್ಟಿ ಸಮುದಾಯಗಳಿಗೆ ಶಿಕ್ಷಣ, ಉದ್ಯೋಗ ಹಾಗೂ ರಾಜಕೀಯ ಕ್ಷೇತ್ರಗಳಲ್ಲಿ ಮೀಸಲಾತಿ ನೀಡಿದ್ದಾರೆ. ಆದರೆ ಪತ್ರಿಕಾರಂಗದಲ್ಲಿ ಮೀಸಲಾತಿ ಇಲ್ಲ. ಹೀಗಾಗಿ ಎಸ್ಸಿ, ಎಸ್ಟಿ, ಹಿಂದುಳಿದವರು ಹಾಗೂ ಅಲ್ಪಸಂಖ್ಯಾತರು ಪತ್ರಿಕಾರಂಗದಲ್ಲಿ ಕಡಿಮೆ ಸಂಖ್ಯೆಯಲ್ಲಿದ್ದಾರೆ. ಇವರಿಗೆ ಸಮಾನ ಅವಕಾಶಗಳು ದೊರೆತಿದ್ದರೆ ಹೆಚ್ಚಿನ ಸಂಖ್ಯೆಯಲ್ಲಿ ಪತ್ರಕರ್ತರು ರೂಪುಗೊಳ್ಳುತ್ತಿದ್ದರು. ನಾವ್ಯಾರೂ ಯಾರಿಗಿಂತಲೂ ಕಡಿಮೆಯಿಲ್ಲ; ಅವಕಾಶಗಳಿಂದ ವಂಚಿತರಾಗಿದ್ದೇವೆ ಅಷ್ಟೇ ಎಂದರು. ಎಸ್ಸಿ, ಎಸ್ಟಿ ಸಮುದಾಯಗಳ ಅಭಿವೃದ್ಧಿಗಾಗಿ ಎಸ್ಸಿಎಸ್ಪಿ/ಟಿಎಸ್ಪಿ ಕಾಯ್ದೆಯನ್ನು ಕೇಂದ್ರ ಸರ್ಕಾರದಲ್ಲೂ ಜಾರಿಗೆ ತರಬೇಕಾಗಿದೆ. ಜನರು ಮತ ನೀಡಿ ಪ್ರತಿನಿಧಿಗಳನ್ನು ಆಯ್ಕೆ ಮಾಡಿದ್ದಾರೆ. ಕೇಂದ್ರದಲ್ಲಿ ಎಸ್ಸಿಎಸ್ಪಿ/ಟಿಎಸ್ಪಿ ಕಾಯ್ದೆ ಏಕೆ ಜಾರಿಯಾಗಿಲ್ಲ ಎಂಬುದನ್ನು ಪ್ರಶ್ನಿಸಬೇಕು. ಆಂಧ್ರಪ್ರದೇಶ, ತೆಲಂಗಾಣ ಮತ್ತು ಕರ್ನಾಟಕದಲ್ಲಿ ಮಾತ್ರ ಇಂತಹ ಕಾಯ್ದೆ ಜಾರಿಯಲ್ಲಿದೆ ಎಂದು ಹೇಳಿದರು. ಸಮಾರಂಭದಲ್ಲಿ ಮಾಜಿ ಸಚಿವ ಕೆ. ವೆಂಕಟೇಶ್, ಶಾಸಕ ಎ.ಆರ್. ಕೃಷ್ಣಮೂರ್ತಿ, ವಿಧಾನ ಪರಿಷತ್ ಸದಸ್ಯ ಕೆ. ಶಿವಕುಮಾರ್, ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್, ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಡಾ. ಆಯಿಷ ಕಾನಂ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ಉಪಾಧ್ಯಕ್ಷ ಮದನಗೌಡ, ಸಂಘದ ಅಧ್ಯಕ್ಷ ಚಲುವರಾಜು, ಪ್ರಧಾನ ಕಾರ್ಯದರ್ಶಿ ಸೋಮಶೇಖರ್ ಕೆರಗೋಡು, ಸಂಚಾಲಕರಾದ ಎನ್. ರವಿಕುಮಾರ್ ಟೆಲೆಕ್ಸ್, ಶಿಶಿಧರ್ ಮೊದಲಾದವರು ಹಾಜರಿದ್ದರು.

ಗಣ್ಯರಿಗೆ ದತ್ತಿ ಪ್ರಶಸ್ತಿ ಪ್ರದಾನ

ಈ ಸಾಲಿನ ಬಾಬಾ ಸಾಹೇಬ್ ಅಂಬೇಡ್ಕರ್ ಪ್ರಶಸ್ತಿಯನ್ನು ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಹಾಗೂ ವಿಜಯಕಾಲ ದಿನಪತ್ರಿಕೆಯ ಸಂಪಾದಕ ಕೆ.ದೀಪಕ್, ದಸಂಸ ಸಂಸ್ಥಾಪಕ ಪ್ರೊ. ಬಿ. ಕೃಷ್ಣಪ್ಪ ದತ್ತಿ ಪ್ರಶಸ್ತಿಯನ್ನು ದಸಂಸ ಸಂಚಾಲಕ ಗುರುಪ್ರಸಾದ್ ಕೆರಗೋಡು, ಬಿ. ರಾಚಯ್ಯ ದತ್ತಿ ಪ್ರಶಸ್ತಿಯನ್ನು ಮಾಹಿತಿ ಆಯುಕ್ತ ಬದರುದ್ದೀನ್ ಹಾಗೂ ಬಿ. ಬಸವಲಿಂಗಪ್ಪ ಪ್ರಶಸ್ತಿಯನ್ನು ಯತಿರಾಜ್ ಬ್ಯಾಲಹಳ್ಳಿ ಅವರಿಗೆ ಪ್ರದಾನ ಮಾಡಿ ಗೌರವಿಸಲಾಯಿತು. ಅಲ್ಲದೆ, ಐವರು ಸಂಪಾದಕರಿಗೆ ಗೌರವ ಪುರಸ್ಕಾರ ನೀಡಲಾಯಿತು.

ಮಾದಕ ವಸ್ತುಗಳಿಂದ ದೂರವಿರಿ

ಕೆ.ಶೇಷಾದ್ರಿ ಕರೆ । ಹ್ಯೂಮನ್ ವ್ಯಾಲ್ಯೂಸ್ ವೆಲ್‌ಫೇರ್ ಫೌಂಡೇಶನ್‌ನಿಂದ ಜಾಥ

ರಾಮನಗರ: ತಾತ್ಕಲಿಕ ಮೋಜು, ಮಸ್ತಿಗಾಗಿ ಆರಂಭಿಸುವ ದುಶ್ಚಟಗಳು ಯುವ ಸಮುದಾಯದ ಬದುಕನ್ನು ನಾಶಗೊಳಿಸುತ್ತವೆ ಯುವ ಸಮುದಾಯ ಈ ದೇಶದ ಆಸ್ತಿ. ಮಾದಕ ವಸ್ತುಗಳಿಂದ ದೂರವಿದ್ದು ಆರೋಗ್ಯಕರ ಜೀವನ ನಡೆಸಬೇಕು. ಉತ್ತಮ ಸಮಾಜ ನಿರ್ಮಾಣದತ್ತ ಗುರಿ ಇಡಬೇಕು ಎಂದು ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಹೇಳಿದರು.

ಹ್ಯೂಮನ್ ವ್ಯಾಲ್ಯೂಸ್ ವೆಲ್‌ಫೇರ್ ಫೌಂಡೇಶನ್ ವತಿಯಿಂದ ಗುರುವಾರ ರಾಮನಗರದ ಟಿಪ್ಪು ಸರ್ಕಲ್‌ನಿಂದ ಪೋಲೀಸ್ ಭವನದವರೆಗೆ ಮಾದಕವಸ್ತು ಮುಕ್ತ ರಾಮನಗರ ಘೋಷವಾಕ್ಯದೊಡನೆ ನಡೆದ ಜಾಗೃತಿ ಜಾಥಾಕ್ಕೆ ನಗರಸಭೆ ಆವರಣದಲ್ಲಿ ಚಾಲನೆ ನೀಡಿ ಮಾತನಾಡಿದರು.

ಮಾದಕ ವಸ್ತು ಸೇವನೆ ಸಾಮಾಜಿಕ ಪಿಡುಗಾಗಿ ಕಾಡುತ್ತಿದೆ ದುಶ್ಚಟಗಳು ಯುವಕರ ಬದುಕನ್ನು ನಾಶಗೊಳಿಸುತ್ತಿವೆ. ರೋಗಮುಕ್ತ ಸಮಾಜ ನಿರ್ಮಾಣಕ್ಕೆ ಪ್ರೇರಣೆಯಾಗಿ ಹ್ಯೂಮನ್ ವ್ಯಾಲ್ಯೂಸ್ ವೆಲ್‌ಫೇರ್ ಫೌಂಡೇಶನ್‌ನವರು ಕೆಲಸ ಮಾಡುತ್ತಿರುವುದು ಒಂದು ಉತ್ತಮ ಬೆಳವಣಿಗೆಯಾಗಿದೆ. ಇತ್ತೀಚೆಗೆ ಯುವಕರು ಮಾದಕವಸ್ತುಗಳತ್ತ ಹೆಚ್ಚು ಆಕರ್ಷಿತಿಕರಾಗಿ ಮಾದಕ ಸೇವನೆ ಸಾಮಾಜಿಕ ಪಿಡುಗಾಗಿ ಕಾಡುತ್ತಿದೆ. ತಾತ್ಕಲಿಕ ಮೋಜು, ಮಸ್ತಿಗಾಗಿ ಆರಂಭಿಸುವ ದುಶ್ಚಟಗಳು ಯುವಕರ ಬದುಕನ್ನು ನಾಶಗೊಳಿಸುತ್ತವೆ ಯುವಕರು ಈ ದೇಶದ ಆಸ್ತಿಯಾಗಿದ್ದು ಮಾದಕ ವಸ್ತುಗಳಿಂದ ದೂರವಿದ್ದು ಆರೋಗ್ಯಕರ ಜೀವನ ನಡೆಸಬೇಕು. ಉತ್ತಮ ಸಮಾಜ ನಿರ್ಮಾಣದತ್ತ ಗುರಿ ಇಡಬೇಕು ಎಂದರು. ನಗರಸಭೆ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಶಿವಕುಮಾರಸ್ವಾಮಿ, ಹ್ಯೂಮನ್ ವ್ಯಾಲ್ಯೂಸ್ ವೆಲ್‌ಫೇರ್ ಫೌಂಡೇಶನ್‌ನ ಮೊಹಮ್ಮದ್ ಅಮೀರ್ ರಾಜಾ ಖಾನ್, ಅಧ್ಯಕ್ಷ ನಯಾಜ್ ವುಲ್ಲಾ ಖಾನ್, ವ್ಯವಸ್ಥಾಪಕ ನಿರ್ದೇಶಕ ಬಿ.ಬಿ. ಆಯೇಷಾ, ಸಂಸ್ಥೆಯ ಸೈಯದ್ ನಾಸೀರ್, ಮೌಲಾ, ಸೈಯದ್ ಅಲಿ, ಯೂಸೂಪ್ ಅಲಿ ಖಾನ್, ನಗರಸಭೆ ಅಧಿಕಾರಿಗಳಾದ ವಿಶ್ವನಾಥ್, ನಾಗರಾಜು, ಪೋಲೀಸ್ ಸಬ್‌ಇನ್ಸ್‌ಪೆಕ್ಟರ್ ದೇವು, ಮುಖಂಡರಾದ ಹರೀಶ್, ಅಸ್ಲಂ ಇದ್ದರು.

ಮಾದಕ ವಸ್ತುಗಳ ವಿರುದ್ಧ ಜನರ ಸಹಕಾರವೂ ಬೇಕು

ಜನರ ಆರೋಗ್ಯಕ್ಕೆ ಹಾನಿಕಾರವಾದ ಔಷಧಗಳನ್ನು ನಗರದಲ್ಲೂ ಕೆಲವು ಅಂಗಡಿಗಳಲ್ಲಿ ಮತ್ತು ಬರುವ ಔಷಧಗಳನ್ನು ಮಾರಾಟ ಮಾಡುತ್ತಿರುವುದು ಗಮನಕ್ಕೆ ಬಂದಿದೆ. ಪೊಲೀಸ್ ಇಲಾಖೆಯಿಂದ ಮಾತ್ರವೇ ಮಾದಕ ಸೇವನೆಯನ್ನು ತಡೆಗಟ್ಟಲು ಸಾಧ್ಯವಿಲ್ಲ. ಅದಕ್ಕೆ ಸಮಾಜ ಸಂಘ ಸಂಸ್ಥೆಗಳು ಕೈ ಜೋಡಿಸಬೇಕು. ಮಾದಕ ವಸ್ತು ಸೇವನೆಗಾಗಿ ಬಡ ಕುಟುಂಬದ ಮಕ್ಕಳು ತಂದೆ ತಾಯಂದಿರ ಕೂಲಿ ಹಣವನ್ನು ಬಲವಂತದಿಂದ ತೆಗೆದುಕೊಂಡು ಸೇವನೆ ಮಾಡುತ್ತಿದ್ದಾರೆ. ಶಾಲಾ ವಿದ್ಯಾರ್ಥಿಗಳ ಮೂಲಕ ಸಂಸ್ಥೆಯವರು ಮಾದಕ ವಸ್ತು ಸೇವನೆಯಿಂದ ಆಗುವ ತೊಂದರೆಗಳನ್ನು ಸಮಾಜಕ್ಕೆ ತಿಳಿಸುವುದರ ಮೂಲಕ ಜಾಥಾ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಇಂತಹ ಜನಪರವಾದ ಕಾರ್ಯಕ್ರಮಗಳಿಗೆ ನಮ್ಮ ಬೆಂಬಲ ಸದಾ ಇರುತ್ತದೆ. ರಾಮನಗರದಲ್ಲಿ ರಾತ್ರಿ ಸಮಯದಲ್ಲಿ ಪಾರ್ಕ್ ಇನ್ನಿತರ ಜನನಿಬಿಡ ಜಾಗಗಳಲ್ಲಿ ಮಾದಕ ವ್ಯಸನಿಗಳ ಸಂಚಾರ ಹೆಚ್ಚಾಗಿದೆ. ಇದರಿಂದ ಸಾರ್ವಜನಿಕರು ನಿರ್ಭಿತಿಯಿಂದ ಓಡಾಡಲು ಭಯಬೀತರಾಗುವ ಸನ್ನಿವೇಶ ಉಂಟಾಗಿದೆ. ಈ ಸಾಮಾಜಿಕ ಪಿಡುಗಿನ ವಿರುದ್ಧ ಹೋರಾಡುತ್ತಿರುವ ಇಂತಹ ಸಂಸ್ಥೆಯವರಿಗೆ ಜನರು ಬೆಂಬಲ ನೀಡಬೇಕು ಎಂದರು. ಕೆಎಂಎಫ್ ಮಾಜಿ ಅಧ್ಯಕ್ಷ ಪಿ. ನಾಗರಾಜು ಮಾತನಾಡಿ ಮಾದಕ ವಸ್ತುಗಳ ಸೇವನೆಯನ್ನು ಯಾರಿಂದಲೂ ತಡೆಗಟ್ಟಲು ಸಾಧ್ಯವಾಗದಷ್ಟು ದೂರಕ್ಕೆ ಹೋಗಿರುವುದು ವಿಷಾಧನೀಯ ಇದನ್ನು ತಡೆಗಟ್ಟುವಲ್ಲಿ ಸಾಮಾಜಿಕ ಅರಿವು ಮೂಡಿಸುವ ಶಾಲಾ ಮಕ್ಕಳಿಂದ ಜಾಥಾ ಕಾರ್ಯಕ್ರಮ ಹಮ್ಮಿಕೊಂಡಿರುವ ಹ್ಯೂಮನ್ ವ್ಯಾಲ್ಯೂಸ್ ವೆಲ್‌ಫೇರ್ ಫೌಂಡೇಶನ್ ಕಾರ್ಯ ಶ್ಲಾಘನೀಯವಾದುದು. ಯುವಕರ ಮನಸ್ಸು ಚಂಚಲವಾಗಿರುವುದರಿಂದ ಪೊಲೀಸ್ ಇಲಾಖೆ ಕಠಿಣವಾದ ಕ್ರಮಗಳನ್ನು ಕೈಗೊಂಡಾಗ ಮಾತ್ರ ಮಾದಕ ಸೇವನೆಗೆ ಕಡಿವಾಣ ಹಾಕಲು ಸಾಧ್ಯ ಎಂದರು.

ಮೊದಲ ಪುಟದಿಂದ

ಸಿದ್ದರಾಮಯ್ಯ ಪ್ರತಿಮೆ ತೆರವು

ಬ್ಯಾನರ್ ಅಳವಡಿಸಿ, ಸಿದ್ದರಾಮಯ್ಯ ಸರ್ಕಲ್ ನಿರ್ಮಾಣ ಮಾಡಿದ್ದರು. ಈಗ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕಲಬುರಗಿ ಪ್ರವಾಸದಲ್ಲಿ ಇರುವಾಗಲೇ ಪ್ರತಿಮರ ಸ್ಥಾಪನೆ ಮಾಡಿದ್ದಾರೆ. ಮಹಾನಗರ ಪಾಲಿಕೆ ಅಧಿಕಾರಿಗಳು ಪೊಲೀಸ್ ಬಂದೋಬಸ್ತಲ್ಲಿ ಸಿದ್ದರಾಮಯ್ಯ ಮೂರ್ತಿ ತೆರವು ಮಾಡಿದ್ದಾರೆ. ಯಾವುದೇ ಅನುಮತಿ ಪಡೆಯದೆ ಪ್ರತಿಷ್ಠಾಪನೆ ಮಾಡಿದ್ದಕ್ಕೆ ತೆರವು ಮಾಡಲಾಗಿದೆ. ಈ ಹಿಂದೆ ಸಿದ್ದರಾಮಯ್ಯ ಸರ್ಕಲ್ ಬ್ಯಾನರ್ ಕಟ್ಟುವಾಗಲೂ ಅನುಮತಿ ಪಡೆದಿರಲಿಲ್ಲ.

ತಂಟೆಗೆ ಬಂದ್ರೆ ಸುಮ್ಮನೆ ಬಿಡಲ್ಲ!

ಎಂದು ಸಚಿವ ಶಿವರಾಜ ತಂಗಡಗಿ ಎಚ್ಚರಿಕೆ ನೀಡಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜನಾರ್ದನ ರೆಡ್ಡಿ ಕುರಿತ ತಮ್ಮ ಎಕ್ಸ್ ಪೋಸ್ಟ್ ಬಗೆಗಿನ ಪ್ರಶ್ನೆಗೆ ಉತ್ತರಿಸಿದರು. ಜನಾರ್ದನ ರೆಡ್ಡಿ ನನ್ನನ್ನು ಲೇ ಎಂದಿದ್ದಾರೆ. ಶಾಸಕ ಗಣೇಶ್ ಅವರನ್ನು ಅವಾಚ್ಯ ಪದ ಬಳಸಿ ದರ್ಪ ಮೆರೆದಿದ್ದಾರೆ. ಜನಾರ್ದನ ರೆಡ್ಡಿ ಅವರಿಗೆ ಮದ ನೆತ್ತಿಗೇರಿದೆ ಎಂದು ಕಿಡಿಕಾರಿದರು.

ಕೋಟಿ ಕೋಟಿ ಹಣ ಪಡೆದು ಹುದ್ದೆ ಆರೋಪ

ಆಯ್ಕೆಯಾಗಿದ್ದರು. ಅಂದಿನ ಬಿಜೆಪಿ ಸರ್ಕಾರ ಅವರನ್ನು 6 ವರ್ಷಗಳ ಅವಧಿಗೆ ಅಧಿಕಾರಿಗಳ ವರ್ಗದ ಅಡಿಯಲ್ಲಿ ನೇಮಕ ಮಾಡಿತ್ತು.

ಇನ್ಸ್‌ಪೆಕ್ಟರ್ ವಿವಾದ: ಖಾಸಗಿ ವಾಹಿನಿ ವಿರುದ್ಧವೇ ಪ್ರಕರಣ

ಸಮುದಾಯಗಳ ನಡುವೆ ದ್ವೇಷ, ಅಸಹ್ಯ ಅಥವಾ ವೈಮನಸ್ಸನ್ನು ಉತ್ತೇಜಿಸುವ ಉದ್ದೇಶದಿಂದ ಹೇಳಿಕೆಗಳನ್ನು ನೀಡುವುದು ಅಥವಾ ಪ್ರಕಟಿಸುವುದು) ಅಡಿ ಎಫ್‌ಐಆರ್ ದಾಖಲಾಗಿದೆ.

ನನ್ನ ಮಾತು ಎಷ್ಟು ನಡೆಯುತ್ತೇ? ಅನ್ನೋದು ನನಗೆ ಮಾತ್ರ ಗೊತ್ತು!

ಮಾರ್ಮಿಕ ಮಾತುಗಳನ್ನಾಡಿರುವುದು ಚರ್ಚೆಗೆ ಗ್ರಾಸವಾಗಿದೆ. ಸರ್ಕಾರದಲ್ಲಿ ತಮ್ಮ ಸಲಹೆಗಳಿಗೆ ಮನ್ನಣೆ ಸಿಕ್ಕಿಲ್ಲ ಅಂತ ಪರೋಕ್ಷವಾಗಿ ಸಿದ್ದರಾಮಯ್ಯ ಬೇಸರ ಹೊರಹಾಕಿದ್ದಾರೆ.

ಪರಿಹಾರ ಕಾರ್ಯಕ್ಕೆ ಸೂಚನೆ

ಪರಾಮರ್ಶಿಸಲಾಗುತ್ತದೆ. ಮುಂಬರುವ ದಿನಗಳಲ್ಲಿ ಬರ ಪರಿಸ್ಥಿತಿ ಅರ್ಹತೆಗೆ ಅನುಗುಣವಾಗಿ ಹೆಚ್ಚುವರಿ ಬರಪೀಡಿತ ತಾಲೂಕುಗಳ ಪಟ್ಟಿಯನ್ನು ಹಂತ-ಹಂತವಾಗಿ ಪ್ರಕಟಿಸಲಾಗುವುದು ಎಂದು ಸರ್ಕಾರ ತಿಳಿಸಿದೆ.

ಎಲ್ಲರಿಗೂ ಗುಣಮಟ್ಟದ ಶಿಕ್ಷಣ

ರಾಜ್ಯದ ಕೀರ್ತಿಯನ್ನು ಹೆಚ್ಚಿಸಿದೆ. ಸುಮಾರು 4.5 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಪದವಿ ಪೂರ್ವ ಕಾಲೇಜು ಕಟ್ಟಡ ಮತ್ತು ಶ್ರೀ ಘನಲಿಂಗ ಶಿವಯೋಗಿ ಸಭಾಭವನವನ್ನು ಉದ್ಘಾಟಿಸಿರುವುದು ಸಂತಸ ತಂದಿದೆ ಎಂದು ಹೇಳಿದರು.

ಶಾಸಕ ಜಿ.ಟಿ.ದೇವೇಗೌಡ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಸಾಲೂರು ಬೃಹನ್ಮಠದ ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮೀಜಿ, ಶ್ರೀರಂಗಪಟ್ಟಣದ ಶ್ರೀ ತ್ರಿನೇತ್ರ ಮಹಾಂತ ಶಿವಯೋಗಿ ಸ್ವಾಮೀಜಿ, ವಿಧಾನ ಪರಿಷತ್ ಸದಸ್ಯರಾದ ಕೆ.ವಿವೇಕಾನಂದ, ಕೆ. ಎಸ್.ನವೀನ್ ಉಪಸ್ಥಿತರಿದ್ದರು.

ಪಡಿತರ ಕಾರ್ಡ್ ಇ-ಕೆವೈಸಿ ಗಡುವು ವಿಸ್ತರಣೆ: ರಿಜ್ವಾನ್

ಮಾಡಿಸಲು ಸಮಸ್ಯೆ ಆಗಿತ್ತು. ಈ ಹಿನ್ನೆಲೆ ಗಡುವು ವಿಸ್ತರಣೆ ಮಾಡಲಾಗಿದೆ. ಜನರಿಗೆ ಅನುಕೂಲ ಆಗುವ ಎರಡು ಮಹತ್ವದ ನಿರ್ಧಾರವನ್ನು ಸರ್ಕಾರ ತೆಗೆದುಕೊಂಡಿದೆ ಎಂದು ಆಹಾರ ಸಚಿವ ರಿಜ್ವಾನ್ ಅರ್ಷದ್ ತಿಳಿಸಿದರು.

ನ್ಯಾಯ ಬೆಲೆ ಅಂಗಡಿಗಳ ಸಮಯವನ್ನು ಸರ್ಕಾರ ಪರಿಷ್ಕರಣೆ ಮಾಡಿದೆ. ಕೂಲಿ ಕಾರ್ಮಿಕರು, ಆಟೋ ಚಾಲಕರು, ಕಟ್ಟಡ ಕಾರ್ಮಿಕರು ರೇಷನ್ ಪಡೆಯಲು ಸಹಕಾರಿ ಆಗುವಂತೆ ನ್ಯಾಯಬೆಲೆ ಅಂಗಡಿ ಸಮಯವನ್ನು ಪರಿಷ್ಕರಣೆ ಮಾಡಲಾಗಿದೆ. ಅಕ್ಟೋಬರ್ 1ರಿಂದ ನೂತನ ಸಮಯ ಜಾರಿಗೆ ಬರಲಿದೆ. ನ್ಯಾಯ ಬೆಲೆ ಅಂಗಡಿಗಳ ನೂತನ ಸಮಯ ಬೆಳಗ್ಗೆ 7 ಗಂಟೆಯಿಂದ ಮಧ್ಯಾಹ್ನ 12ರ ವರೆಗೆ ಮತ್ತು ಸಂಜೆ 4 ಗಂಟೆಯಿಂದ ರಾತ್ರಿ 8 ಗಂಟೆವರೆಗೆ ಪಡಿತರ ನೀಡಲು ಸಮಯ ನಿಗದಿ ಮಾಡಲಾಗಿದೆ ಎಂದು ಸಚಿವರು ಹೇಳಿದರು.

'ಸ್ವಚ್ಛತಾ ಹೀ ಸೇವಾ' ಅಭಿಯಾನ

ಗುಂಡ್ಲುಪೇಟೆ: ಸರ್ಕಾರದ ನಗರಾಭಿವೃದ್ಧಿ ಇಲಾಖೆ ಹಾಗೂ ರಾಜ್ಯ ಅಭಿಯಾನ ನಿರ್ದೇಶನಾಲಯದ ಸುತ್ತೋಲೆಯನ್ವಯ ಗುಂಡ್ಲು ಪೇಟೆ ಪುರಸಭೆ ವತಿಯಿಂದ 'ಸ್ವಚ್ಛತೆಯಲ್ಲಿ ಸಹಭಾಗಿತ್ವ, ಸ್ವಚ್ಛ ಭಾರತ, ವಿಕಸಿತ ಭಾರತ' ಎಂಬ ಘೋಷವಾಕ್ಯದಡಿ ಹಮ್ಮಿಕೊಂಡಿರುವ 'ಸ್ವಚ್ಛತಾ ಹೀ ಸೇವಾ 2026' ಅಭಿಯಾನಕ್ಕೆ ಪುರ ಸಭೆ ಆವರಣದಲ್ಲಿ ಚಾಲನೆ ನೀಡಲಾಯಿತು.

ಪುರಸಭೆ ಮುಖ್ಯಾಧಿಕಾರಿ ಎಸ್. ಶರವಣ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಅಧಿಕಾರಿಗಳು, ಸಿಬ್ಬಂದಿ, ಪೌರಕಾರ್ಮಿಕರು ಹಾಗೂ ಸಾರ್ವಜನಿಕರಿಗೆ ಸ್ವಚ್ಛತಾ ಪ್ರತಿಜ್ಞಾವಿಧಿ ಬೋಧಿಸಿದರು. ನಂತರ ಮಾತನಾಡಿದ ಅವರು, ಸೆಪ್ಟೆಂಬರ್ 17ರಿಂದ ಅಕ್ಟೋಬರ್ 2ರವರೆಗೆ ಪಟ್ಟಣದಾದ್ಯಂತ ವಿವಿಧ ಸ್ವಚ್ಛತಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಸ್ವಚ್ಛತಾ ಗುರಿ ಘಟಕಗಳ (ಅಖಿಗ) ಪರಿವರ್ತನೆ, ತ್ಯಾಜ್ಯ ವಿಂಗಡಣೆ ಹಾಗೂ ಜಾಗೃತಿ ಜಾಥಾಗಳನ್ನು ನಡೆಸಲಾಗುವುದು.

ಸಾರ್ವಜನಿಕರು ತಮ್ಮ ಮನೆ ಹಾಗೂ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟು ಕೊಂಡು ಅಭಿಯಾನದಲ್ಲಿ ಸಕ್ರಿಯವಾಗಿ ಕೈಜೋಡಿಸಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಪುರಸಭೆಯ ಅಧಿಕಾರಿಗಳು, ಸಿಬ್ಬಂದಿ, ವರ್ಗ ಪೌರಕಾರ್ಮಿಕರು ಇತರರು ಉಪಸ್ಥಿತರಿದ್ದರು

ಹಾಲು ಉತ್ಪಾದಕರಿಗೆ ಸನ್ಮಾನ

ಮೈಸೂರು: ತಾಲ್ಲೂಕಿನ ಕಸಬಾ ಹೋಬಳಿ ಬಂಡಿಪಾಳ್ಯ ಹಾಲು ಉತ್ಪಾದಕರ ಸಹಕಾರ ಸಂಘ(ಬಿ ಎಂ ಸಿ ಕೇಂದ್ರ)ದ 2025-2026 ನೇ ಸಾಲಿನ ವಾರ್ಷಿಕ ಮಹಾಸಭೆಯಲ್ಲಿ ಭಾಗವಹಿಸಿ ಸಂಘಕ್ಕೆ ಅತಿ ಹೆಚ್ಚು ಹಾಲು ಪೂರೈಸಿದ ಉತ್ಪಾದಕರನ್ನು ಸನ್ಮಾನಿಸಲಾಯಿತು.

ಅತಿ ಎಪಿಎಂಸಿ ಬಸವರಾಜು

ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಮೈಸೂರು ಜಿಲ್ಲಾ ಹಾಲು ಒಕ್ಕೂಟದ ಮಾಜಿ ಅಧ್ಯಕ್ಷ ಹಾಗೂ ಮೈಸೂರು ಜಿಲ್ಲಾ ಸಹಕಾರಿ ಯೂನಿಯನ್ ನಿರ್ದೇಶಕ ಕೆ.ಉಮಾಶಂಕರ್ ಮಾತನಾಡಿ, ಒಕ್ಕೂಟದ ಸವಲತ್ತುಗಳ ಬಗ್ಗೆ ಮಾಹಿತಿ ನೀ

ಪ್ರಧಾನಿ ಮೋದಿ ಜನ್ಮದಿನ: ಪೌರಕಾರ್ಮಿಕರಿಗೆ ಬಾಗಿನ

ಚನ್ನಪಟ್ಟಣ: ಚನ್ನಪಟ್ಟಣದಲ್ಲಿ ಮಹಿಳಾ ಪೌರಕಾರ್ಮಿಕರಿಗೆ ಬಾಗಿನ ಅರ್ಪಿಸುವುದರ ಮೂಲಕ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದ ಡಾ.ಸಿ.ಎನ್. ಮಂಜುನಾಥ್, ಪ್ರಧಾನಿ ನರೇಂದ್ರ ಮೋದಿ ಅವರು ಜನ್ಮದಿವನ್ನು ಆಚರಿಸಿದರು.

ಚನ್ನಪಟ್ಟಣದ ಕೊಲ್ಲಾಪುರದಮ್ಮ ದೇವಾಲಯದ ಆವರಣದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಪೌರಕಾರ್ಮಿಕರ ಮೇಲೆ ಮೊದಲು ಪುಷ್ಪವೃಷ್ಟಿಗೆರೆದು ಸಂಸದರು ನಂತರ ಬಾಗಿನ ಅರ್ಪಿಸಿ ಗೌರವಿಸಿದೆ.

ಪೌರ ಕಾರ್ಮಿಕರು ಸ್ವಚ್ಛತೆಯ ರಾಯಭಾರಿಗಳು

ಈ ವೇಳೆ ಮಾತನಾಡಿದ ಸಂಸದ ಡಾ.ಸಿ.ಎನ್. ಮಂಜುನಾಥ್, ಪೌರಕಾರ್ಮಿಕರು ನಮ್ಮ ಸಮಾಜದ ಸ್ವಚ್ಛತೆಯ ರಾಯಭಾರಿಗಳು. ತಮ್ಮ ಆರೋಗ್ಯವನ್ನೂ ಲೆಕ್ಕಿಸದೆ ಪ್ರತಿದಿನ ಶ್ರಮಿಸುವ ಅವರ ಸೇವೆ ಅತ್ಯಂತ ಅನನ್ಯ ಮತ್ತು ಶ್ಲಾಘನೀಯ. ಸ್ವಚ್ಛ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ಅವರ ಕೊಡುಗೆ ಅಪಾರ. ಅವರ ಪರಿಶ್ರಮವನ್ನು ಗೌರವಿಸುವುದು ನಮ್ಮೆಲ್ಲರ ಕರ್ತವ್ಯ ಎಂದರು.

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಜೀ ಅವರಿಗೆ ಹುಟ್ಟುಹಬ್ಬದ ಶುಭಾಶಯಗಳನ್ನು ಸಲ್ಲಿಸಿದ ಅವರು, ಮೋದಿ ಅವರು ಗುಜರಾತ್ ಮುಖ್ಯಮಂತ್ರಿಯಾಗಿ 13 ವರ್ಷ ಹಾಗೂ ದೇಶದ ಪ್ರಧಾನಮಂತ್ರಿಯಾಗಿ 12 ವರ್ಷಕ್ಕೂ ಹೆಚ್ಚು ಕಾಲ ನಿರಂತರ ರಾಷ್ಟ್ರಸೇವೆ ಸಲ್ಲಿಸುತ್ತಿರುವ ನರೇಂದ್ರ ಮೋದಿ ಅವರು ಸುಶಾಸನ, ಅಭಿವೃದ್ಧಿ ಮತ್ತು ಜನಕಲ್ಯಾಣದ ಸಂಕಲ್ಪದೊಂದಿಗೆ ಮುನ್ನಡೆಯುತ್ತಿದ್ದಾರೆ. ಅವರಿಗೆ ಉತ್ತಮ ಆರೋಗ್ಯ, ಶಕ್ತಿ ಹಾಗೂ ದೀರ್ಘಾಯುಷ್ಯ ದೊರೆಯಲಿ. ವಿಕಸಿತ, ಬಲಿಷ್ಠ ಹಾಗೂ ಸ್ವಾವಲಂಬಿ ಭಾರತ ನಿರ್ಮಾಣದ ಅವರ ಸಂಕಲ್ಪ ಮತ್ತಷ್ಟು ಯಶಸ್ವಿಯಾಗಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾ ಬಿಜೆಪಿ ಅಧ್ಯಕ್ಷರಾದ ಶ್ರೀ ಆನಂದ್ ಸ್ವಾಮಿ, ಜೆಡಿಎಸ್ ಅಧ್ಯಕ್ಷರಾದ ಶ್ರೀ ಜಯಮುತ್ತು, ಚನ್ನಪಟ್ಟಣ ತಾಲ್ಲೂಕು ಬಿಜೆಪಿ ಅಧ್ಯಕ್ಷರಾದ ಶ್ರೀ ಚೇತನ್ ಸೇರಿದಂತೆ ಮೈತ್ರಿಕೂಟದ ಮುಖಂಡರು, ಪದಾಧಿಕಾರಿಗಳು, ಗಣ್ಯರು ಉಪಸ್ಥಿತರಿದ್ದರು.

ರಸ್ತೆಗಳು ಗ್ರಾಮೀಣ ಜನರ ಜೀವನಾಡಿ

ಚಾಮರಾಜನಗರ.ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕಿಲಗೆರೆ ಗ್ರಾಮದಲ್ಲಿ ರಸ್ತೆ,ಚರಂಡಿ ಅಭಿವೃದ್ಧಿ ಕಾಮಗಾರಿಗಳಿಗೆ ಸಚಿವ ಸಿ.ಪುಟ್ಟರಂಗಶೆಟ್ಟಿ ಗುದ್ದಲಿಪೂಜೆ ನೆರವೇರಿಸಿದರು.

ತಾಲ್ಲೂಕಿನ ಕಿಲಗೆರೆ ಗ್ರಾಮದ ಪರಿಶಿಷ್ಟ ಜಾತಿ ಕಾಲೋನಿಯಲ್ಲಿ ಎಸ್‌ಇಪಿ ಯೋಜನೆಯಡಿ 1 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಮತ್ತು ಚರಂಡಿ ಕಾಮಗಾರಿಗೆ ಭೂಮಿಪೂಜೆ ನೆರವೇರಿದರು.

ನಂತರ ಮಾತನಾಡಿದ ಅವರು ರಸ್ತೆಗಳು ಗ್ರಾಮೀಣ ಜನರ ಜೀವನಾಡಿಯಾಗಿದೆ. ಈ ನಿಟ್ಟಿನಲ್ಲಿ ತಮ್ಮ ಕ್ಷೇತ್ರ ವ್ಯಾಪ್ತಿಯ ವಿವಿಧ ಗ್ರಾಮಾಂತರ ಪ್ರದೇಶಗಳಲ್ಲಿ ಉತ್ತಮ ರಸ್ತೆ, ಚರಂಡಿ, ಸೇತುವೆ ಅಭಿವೃದ್ಧಿಗಳಿಗೆ ಹೆಚ್ಚಿನ ಒತ್ತು ನೀಡಲಾಗಿದೆ. ಜನರ ಅಭಿವೃದ್ಧಿ ಕೆಲಸಗಳೆ ನನ್ನ ಗುರಿಯಾಗಿದ್ದು,ವಿವಿಧ ಅಭಿವೃದ್ಧಿ ಯೋಜನೆಯಡಿ ಅನುದಾನ ತಂದು ಸಾಕಷ್ಟು ಕೆಲಸಗಳನ್ನು ಮಾಡುತ್ತಿದ್ದು,ಮುಂದೆಯೂ ಸಹ ಜನತೆಯ ಸಹಕಾರದಿಂದ ಕ್ಷೇತ್ರ ವ್ಯಾಪ್ತಿಯಲ್ಲಿ ಮತ್ತಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡುವುದಾಗಿ ತಿಳಿಸಿದರು ಈ ಸಂದರ್ಭದಲ್ಲಿ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಅಧ್ಯಕ್ಷ ಕೆ.ಆರ್ ಬಸವರಾಜು, ಮುಖಂಡರಾದ ಎ.ಎಸ್ ಗುರುಸ್ವಾಮಿ, ಶೆಬ್ಬಂಪ್ಪ, ಸಿದ್ದಮಲ್ಲಪ್ಪ, ಶೇಖರಪ್ಪ, ಸೇರಿದಂತೆ ಗ್ರಾಮದ ಮುಖಂಡರು ಗ್ರಾಮಸ್ಥರು ಇದ್ದರು.

44.37 ಲಕ್ಷ ರೂ. ನಿವ್ವಳ ಲಾಭ

ಭಾರತಿ ಕೋ-ಆಪರೇಟಿವ್ ಕ್ರೆಡಿಟ್ ಸೊಸೈಟಿ । 20ರಂದು ಸಭೆ

ರಾಮನಗರ: ನಗರದಲ್ಲಿರುವ ಭಾರತಿ ಕೋ-ಆಪರೇಟಿವ್ ಕ್ರೆಡಿಟ್ ಸೊಸೈಟಿ 2025-26ನೇ ಆರ್ಥಿಕ ಸಾಲಿಗೆ 44,37,335 ರೂ ನಿವ್ವಳ ಲಾಭಗಳಿಸಿದೆ. ಇದೇ ಸೆ.20ರಂದು ಭಾನುವಾರ ಬೆಳಿಗ್ಗೆ 10.30ಕ್ಕೆ ಸರ್ವ ಸದಸ್ಯರ ಸಭೆಯನ್ನು ಆಯೋಜಿಸಲಾಗಿದೆ ಎಂದು ಸೊಸೈಟಿಯ ಅಧ್ಯಕ್ಷ ಕೆ.ಚಂದ್ರಯ್ಯ ತಿಳಿಸಿದರು.

ಸೊಸೈಟಿಯ ಆವರಣದಲ್ಲಿ ಆಯೋಜಿಸಿದ್ದ ಪತ್ರಿಕಾ ಗೋಷ್ಠಿಯಲ್ಲಿ ಅವರು ಮಾತನಾಡಿದರು. ಸೊಸೈಟಿಯಲ್ಲಿ 4437 ಸದಸ್ಯರಿದ್ದಾರೆ. ಸೊಸೈಟಿ ಎಲ್ಲ ನಿರ್ದೇಶಕರ ಮತ್ತು ಸಿಬ್ಬಂದಿಯ ಸಹಕಾರದಲ್ಲಿ ಉತ್ತಮವಾಗಿ ನಡೆಯುತ್ತಿದೆ. ವಾರ್ಷಿಕ 40 ಕೋಟಿ ರೂ ವ್ಯವಹಾರ ನಡೆಯುತ್ತಿದೆ. 2024-25ನೇ ಸಾಲಿನಲ್ಲಿ 40.81 ಲಕ್ಷ ರೂ ನಿವ್ವಳ ಲಾಭಗಳಿಸಿತ್ತು ಎಂದು ಮಾಹಿತಿ ಕೊಟ್ಟರು. ಪತ್ರಿಕಾಗೋಷ್ಠಿಯಲ್ಲಿ ಉಪಾಧ್ಯಕ್ಷ ಸಿ.ಸೋಮೇಗೌಡ, ನಿರ್ದೇಶಕರುಗಳಾದ ಕೆ.ಪಿ.ಉಮೇಶ್, ಎ.ಬಿ.ಗಂಗಾಧರ ಗಡ, ದೊರೆಸವಾಮಿ, ಎಂ.ಶಿವಲಿಂಗಯ್ಯ, ಜಿ.ಎಲ್.ಆಂಜನಯ್ಯ, ಎ.ಆರ್.ಚಂದ್ರಶೇಖರ್, ಹೆಚ್.ಕೆ.ರುಕ್ಮಿಣಿ, ಎಸ್ ಕೃಷ್ಣಪ್ಪ ಮತ್ತು ಸೊಸೈಟಿ ಅಧಿಕಾರಿಗಳು ಉಪಸ್ಥಿತರಿದ್ದರು.

ಸ್ಥಿರ ಠೇವಣಿ 18.89 ಕೋಟಿ ರೂ

2024-25ನೇ ಆರ್ಥಿಕ ಸಾಲಿನ ಅಂತ್ಯಕ್ಕೆ 15,06,41,057 ರೂ ಠೇವಣಿ ಇತ್ತು. 2025-26ನೇ ಸಾಲಿನಲ್ಲಿ 13,53,84,714 ಠೇವಣಿ ಸಂಗ್ರಹವಾಗಿದೆ. ಇದೇ ಸಾಲಿನಲ್ಲಿ ಠೇವಣಿದಾರರು 9,70,59,349 ರೂ ವಾಪಸ್ಸು ಪಡೆದಿದ್ದಾರೆ. ಇದೀಗ ಠೇವಣಿ 18,89,66,422 ರೂ ಇದೆ. ಈ ಪೈಕಿ ಸದಸ್ಯರ ಉಳಿತಾಯ ಖಾತೆಯಲ್ಲಿ 13,57,971 ಮತ್ತು ಪಿಗ್ಮಿ ಠೇವಣಿ 1,45,47,410 ರೂಗಳಿವೆ ಎಂದು ವಿವರಿಸಿದರು. 2026ರ ಮಾರ್ಚ್ ಅಂತ್ಯಕ್ಕೆ ಸೊಸೈಟಿಗೆ ಬರಬೇಕಾದ ಸಾಲ 19,63,74,900 ರೂ. ಡಿಸಿಸಿ ಬ್ಯಾಂಕ್ ಸೇರಿದಂತೆ ವಿವಿಧ ಬ್ಯಾಂಕುಗಳಲ್ಲಿ ಸರ್ಕಾರದ ನಿಯಮಗಳ ಪ್ರಕಾರ ಸೊಸೈಟಿ ಠೇವಣಿ ಇರಿಸಿದೆ ಎಂದರು.

ಪ್ರತಿಭಾವಂತ ಮಕ್ಕಳಿಗೆ ಪ್ರೋತ್ಸಾಹ

ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯೂ ಪರೀಕ್ಷೆಗಳಲ್ಲಿ ಶೇ 85ಕ್ಕಿಂತ ಹೆಚ್ಚು ಅಂಕಗಳಿಸಿದ ಸದಸ್ಯರ ಮಕ್ಕಳನ್ನು ಪ್ರೋತ್ಸಾಹಿಸುವ ಉದ್ದೇಶದಲ್ಲಿ ಸರ್ವ ಸದಸ್ಯರ ಸಭೆಯಲ್ಲಿ ಸೊಸೈಟಿ ವತಿಯಿಂದ ನಗದು 2000 ರೂ ಪ್ರೋತ್ಸಾಹ ಧನವನ್ನು ಕೊಟ್ಟು ಪುರಸ್ಕರಿಸುವ ಪದ್ದತಿ ರೂಢಿಯಲ್ಲಿದೆ. ಸೊಸೈಟಿಯ ಉಪಾಧ್ಯಕ್ಷ ಸೋಮೇಗೌಡ ಅವರು ತಮ್ಮ ವೈಯಕ್ತಿಕವಾಗಿ ಈ ಮಕ್ಕಳಿಗೆ ಉತ್ತಮ ಗುಣಮಟ್ಟದ ವಾಚುಗಳನ್ನು ಸಹ ಕೊಡುತ್ತಿದ್ದಾರೆ. ಸದಸ್ಯರು ಮೃತ ಪಟ್ಟ ಸಂದರ್ಭದಲ್ಲಿ ಅವರ ಕುಟುಂಬಕ್ಕೆ ಮೂರು ಸಾವಿರ ರೂ ಪರಿಹಾರವನ್ನು ನೀಡುತ್ತಿದ್ದೇವೆ ಎಂದರು. ಸೊಸೈಟಿ ನಡೆದು ಬಂದ 28 ವರ್ಷಗಳಲ್ಲಿ 20 ವರ್ಷಗಳ ಕಾಲ ನಾಗಭೂಷಣಯ್ಯ ಅವರು ಅಧ್ಯಕ್ಷರಾಗಿ ಸೊಸೈಟಿಯನ್ನು ಮುನ್ನೆಡೆಸಿದ್ದಾರೆ. ಅವರು ಹಾಕಿಕೊಟ್ಟ ದಾರಿಯಲ್ಲಿ ಇಂದಿನ ಆಡಳಿತ ಮಂಡಳಿ ನಡೆಯುತ್ತಿದೆ. ತಾವು ಕಳೆದ 8 ವರ್ಷಗಳಿಂದ ಅಧ್ಯಕ್ಷರಾಗಿ ಕರ್ತವ್ಯ ನಿರ್ವಹಿಸುತ್ತಿರುವುದಾಗಿ ಕೆ.ಚಂದ್ರಯ್ಯ ತಿಳಿಸಿದರು. ಸೆ.20ರ ಭಾನುವಾರ ಬೆಳಿಗ್ಗೆ 10.30ಕ್ಕೆ ನಗರದ ವಿವೇಕಾನಂದನಗರದಲ್ಲಿರುವ ರಾಯಲ್ ಕನ್ವೆನ್ಷನ್‌ಹಾಲ್‌ನಲ್ಲಿ ನಡೆಯುವ ಸರ್ವ ಸದಸ್ಯರ ಸಭೆಗೆ ಈಗಾಗಲೆ ಆಹ್ವಾನ ಪತ್ರಿಕೆಗಳನ್ನು ಎಲ್ಲ ಸದಸ್ಯರಿಗೆ ಅಂಚೆಯ ಮೂಲಕ ಕಳುಹಿಸಲಾಗಿದೆ. ಆಹ್ವಾನ ಪತ್ರಿಕೆ ತಲುಪದಿದ್ದವರು ಪತ್ರಿಕೆಯಲ್ಲಿ ಪ್ರಕಟವಾಗುವ ಸುದ್ದಿಯನ್ನೇ ಆಹ್ವಾನ ಪತ್ರಿಕೆ ಎಂದು ಸದಸ್ಯರು ಭಾವಿಸಿ ಸಭೆಯಲ್ಲಿ ಭಾಗವಹಿಸಬೇಕು ಎಂದು ಕೆ.ಚಂದ್ರಯ್ಯ ಮನವಿ ಮಾಡಿದ್ದಾರೆ.

ಪಕೋಡ ಮಾರಿ ಮೋದಿ ಹುಟ್ಟುಹಬ್ಬ ಆಚರಿಸಿದ ಯುವ ಕಾಂಗ್ರೆಸ್ ಆಕ್ರೋಶ

ಮೈಸೂರು: ಪ್ರಧಾನಿ ನರೇಂದ್ರಮೋದಿಯವರು ಉದ್ಯೋಗ ನೀಡುವ ಭರವಸೆ ನೀಡಿ ಅಧಿಕಾರಕ್ಕೆ ಬರುತ್ತಿದ್ದು ನಮಗೆ ಉದ್ಯೋಗ ನೀಡುತ್ತಿಲ್ಲ ಎಂದು ಆರೋಪಿಸಿದ ಯುವ ಕಾಂಗ್ರೆಸ್ ಕಾರ್ಯಕರ್ತರು ರಸ್ತೆಯಲ್ಲೇ ಪಕೋಡ ಮಾರಿ ತಮ್ಮ ಆಕ್ರೋಶ ಹೊರಹಾಕಿದರು.

ನಗರದ ಶ್ರೀರಾಂಪುರ ರಿಂಗ್ ರಸ್ತೆಯಲ್ಲಿ ವಿನೂತನವಾಗಿ ಪ್ರತಿಭಟಿಸಿದ ಜಿಲ್ಲಾ ಯುವ ಕಾಂಗ್ರೆಸ್ ಕಾರ್ಯಕರ್ತರು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಉದ್ಯೋಗ ನೀಡುವಂತೆ ನಾನಾ ಘೋಷಣೆಗಳನ್ನು ಕೂಗಿದರು. ಇದೇ ವೇಳೆ ಮಾತನಾಡಿದ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಚಂದನ್ ಗೌಡ ಮಾತನಾಡಿ, ಪ್ರಧಾನಿ ನರೇಂದ್ರಮೋದಿಯವರ ಜನ್ಮ ದಿನವನ್ನು ನಾವು ಮೂರು ವರ್ಷಗಳಿಂದ ನಿರುದ್ಯೋಗಿಗಳ ದಿನವಾಗಿ ಆಚರಿಸಿಕೊಂಡು ಬರುತ್ತಿದ್ದೇವೆ. ಪ್ರಧಾನಿ ಮೋದಿಯವರಿಗೆ ಉದ್ಯೋಗ ನೀಡಿ ಎಂದರೆ ಪಕೋಡ ಮಾರಿ ಎಂದರು. ಅದಕ್ಕೆ ಪ್ರತಿ ವರ್ಷ ಅವರ ಹುಟ್ಟು ಹಬ್ಬದಂದು ಪಕೋಡ ಮಾರಾಟ ಮಾಡುತ್ತಾ ಮೋದಿಯವರ ಸುಳ್ಳು ಉದ್ಯೋಗದ ಭರವಸೆಯನ್ನು ಜನರಿಗೆ ತಿಳಿಸುವ ಕೆಲಸ ಮಾಡುತ್ತಿದ್ದೇವೆ. ಕಾಂಗ್ರೆಸ್ ಅವಧಿಯಲ್ಲಿ ಅಗತ್ಯ ವಸ್ತುಗಳ ಬೆಲೆ ಎಷ್ಟಿತ್ತು. ಈಗ ಬೆಲೆ ಎಷ್ಟು ಏರಿಕೆ ಕಂಡಿದೆ. ಜನರಿಗೆ ತಿಳಿಸುವ ಕೆಲಸ ಆಗಬೇಕು. ದೇಶದಲ್ಲಿ ದೊಡ್ಡ ದೊಡ್ಡ ಅಣೆಕಟ್ಟು, ಕಟ್ಟಡ ಕಟ್ಟಿದ್ದು ಕಾಂಗ್ರೆಸ್ ಪಕ್ಷ ಅದಕ್ಕೆ ಸುಣ್ಣ ಬಣ್ಣ ಹೊಡೆಯುವ ಕೆಲಸವೂ ನಿಮ್ಮಿಂದ ಆಗದಿರುವುದು ನಾಚಿಕೆಗೇಡಿನ ಸಂಗತಿಯಾಗಿದೆ ಎಂದರು.

ಮೋದಿಯವರು ಯುವ ಜನತೆಗೆ ಉದ್ಯೋಗ ನೀಡಬೇಕು. ಇಲ್ಲವೇ ಪ್ರಧಾನಿ ಹುದ್ದೆಗೆ ರಾಜೀನಾಮೆ ನೀಡಬೇಕು. ಇಷ್ಟು ವರ್ಷಗಳ ಕಾಲ ಮೋದಿಯವರ ಸುಳ್ಳು ನಂಬಿ ಜನರು ಮೋಸ ಹೋಗಿದ್ದು, ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸಲಿದ್ದಾರೆ. ಎಲ್ಲಿಯವರೆಗೂ ಅವರು ಯುವ ಜನರಿಗೆ ಉದ್ಯೋಗ ಕೊಡುವುದಿಲ್ಲವೋ ಅಲ್ಲಿಯವರೆಗೂ ನಾವು ಇಂತಹ ಆಕ್ರೋಶ ಹೊರಹಾಕುತ್ತಲೇ ಇರುತ್ತೇವೆ ಎಂದು ಹೇಳಿದರು.

ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಮಾತನಾಡಿ ಪ್ರಧಾನಿ ನರೇಂದ್ರ ಮೋದಿಯವರು ರಾಜಕೀಯ ಜೀವನಕ್ಕೆ ಬಂದೂ 25ವರ್ಷ ಆಗಿದೆ ಎಂಬ ಕಾರಣಕ್ಕೆ ಒಂದು ತಿಂಗಳ ಕಾಲ ಅವರ ಸಾಧನೆಯನ್ನು ಜನರಿಗೆ ತಿಳಿಸಲು ಹೊರಟಿದ್ದಾರೆ. ಇವರಿಗೆ ನಾಚಿಗೆ ಆಗಬೇಕು.ಬಿಜೆಪಿಯವರಿಗೆ ಮಾನ ಮಾರ್ಯಾದೆ ಇದ್ದರೆ ದೇಶವನ್ನೇ ಬಿಟ್ಟು ತೊಲಗಬೇಕು. ಅಧಿಕಾರವಷ್ಟೇ ಅಲ್ಲ, ದೇಶವನ್ನೇ ಬಿಟ್ಟು ಹೋಗಬೇಕು. ಇಲ್ಲಿಯವರೆಗೆ ಕಾಂಗ್ರೆಸ್ ಪಕ್ಷ ದೇಶವನ್ನು ಕಟ್ಟುವ ಕೆಲಸ ಮಾಡುತಿದೆ. ಅದನ್ನು ಸಂಪೂರ್ಣವಾಗಿ ನಾಶ ಮಾಡಿಬಿಟ್ಟಿದ್ದಾರೆ. ಬಿಜೆಪಿ ದೇಶವನ್ನು ನೂರು ವರ್ಷ ಹಿಂದಕ್ಕೆ ಕೊಂಡೊಯ್ದಿದ್ದಾರೆ. ಶೇ.19ರಷ್ಟು ನಿರುದ್ಯೋಗ ಪ್ರಮಾಣವಿದೆ. ಬಹುತೇಕ ಎಲ್ಲಾ ಯುವಕರನ್ನು ಪುಡ್ ಡೆಲವರಿ ಹುಡುಗರನ್ನಾಗಿ ಮಾಡುತ್ತಿದ್ದಾರೆ. ರಾಹುಲ್ ಗಾಂಧಿ ಚತ್ಯೋಂಕಿ ಗುಂಜ್ ಎಂಬ ಕಾರ್ಯಕ್ರಮ ಮಾಡುತ್ತಿದ್ದಾರೆ. ಯುವಕರನ್ನು ಅದರಲ್ಲೂ ಪ್ರಮುಖವಾಗಿ ಹೆಣ್ಣು ಮಕ್ಕಳನ್ನು ಸಂಘಟಿಸುವ ಕೆಲಸ ಮಾಡುತ್ತಿದ್ದಾರೆ. ಆದರೆ, ಮೋದಿಯವರು ಹೊಸ ಚಿಂತನೆ ಹೆಸರಿನಲ್ಲಿ ಯುವಜನರಿಗೆ ಮೋಸ ಮಾಡುತ್ತಿದ್ದಾರೆಂದು ಕಿಡಿಕಾರಿದರು. ಪ್ರತಿಭಟನೆಯಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ಉಪಾಧ್ಯಕ್ಷ ಸುನೀಲ್, ಫೈಯಾಜ್ ಮಹಮದ್, ಅನುಪಮ, ಪ್ರಧಾನ ಕಾರ್ಯದರ್ಶಿ ಚತುರ್ ಗೌಡ, ರಾಜು ಇಲವಾಲ ಇನ್ನಿತರರು ಪ್ರತಿಭಟನೆಯಲ್ಲಿದ್ದರು.

ನಾಳೆ ಚೊಚ್ಚಲ ನಾಟಕ ಪ್ರದರ್ಶನ

ಮೈಸೂರು: ಹಿರಿಯ ರಂಗಕರ್ಮಿ ಹಾಗೂ ಕಿರಿಯರು ಸೇರಿಕೊಂಡು ಶಿವ ಟ್ರಸ್ಟ್ ಎಂಬ ರಂಗ ಸಂಸ್ಥೆ ಸ್ಥಾಪಿಸಿಕೊಂಡಿದ್ದು, ಅದರ ಚೊಚ್ಚಲ ನಾಟಕ ಪ್ರದರ್ಶನ ಸೆ.19, 20 ರಂದು ಕಲಾಮಂದಿರದ ಕಿರು ರಂಗಮಂದಿರದಲ್ಲಿ ನಡೆಯಲಿದೆ ಎಂದು ಹಿರಿಯ ಪತ್ರಕರ್ತ ಜಿ.ಪಿ.ಬಸವರಾಜ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಜಯಂತ ಕಾಯ್ಕಿಣಿ ಅವರ ಮೂಲ ಕಥೆಯಾದ ಅಮೃತ ಬಳ್ಳಿಯನ್ನು ರಂಗ ರೂಪಕ್ಕಿಳಿಸಲಾಗಿದೆ. ಪ್ರಶಾಂತ್ ಹಿರೇಮಠ ನಿರ್ದೇಶಿಸಿದ್ದಾರೆ. ಇನ್ನು, ನಾಲ್ಕೈದು ದಶಕ ಹಿಂದೆ ಮಾಧ್ಯಮಗಳು ರಂಗಭೂಮಿಯ ಹೊಸ ಪ್ರಯೋಗ, ಹೊಸ ಅಲೆ ಸಿನಿಮಾಗಳ ಬಗ್ಗೆ ವಿಮರ್ಶೆ ಮಾಡುತ್ತಿದ್ದ ವೇಳೆ ಅದನ್ನು ಓದಿದವರು ಉತ್ತೇಜನಗೊಂಡು ಅವನ್ನು ವೀಕ್ಷಿಸುವುದು ನಡೆದಿತ್ತು. ಈ ರೀತಿ ಮಾಧ್ಯಮಗಳು ಉತ್ತೇಜನ ನೀಡುತ್ತಿದ್ದವು. ಆದರೆ ಈಗ ಆ ಪರಿಸ್ಥಿತಿ ಬದಲಾಗಿರುವುದು ಬೇಸರದ ಸಂಗತಿಯಾಗಿದೆ. ಆದ್ದರಿಂದ ಹೊಸ ತಲೆಮಾರಿನ ಪತ್ರಕರ್ತರು ಇತ್ತ ಗಮನ ಹರಿಸಬೇಕೆಂದು ಸಲಹೆ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿವೃತ್ತ ಅಧಿಕಾರಿ ವಿ.ಎನ್. ಮಲ್ಲಿಕಾರ್ಜುನ ಮಾತನಾಡಿ, ಎನ್. ಮಹೇಶ್‌ಕುಮಾರ್ ಮೂಲ ಕೃತಿಯನ್ನು ರಂಗರೂಪಕ್ಕಿಳಿಸಿದ್ದಾರೆ. ಪ್ರವೇಶ ದರ 150 ರೂ.ಗಳಾಗಿದ್ದು, ಕೌಂಟರ್‌ನಲ್ಲಿ ಹಾಗೂ ಆನ್‌ಲೈನ್‌ನಲ್ಲಿ ಪಡೆಯಬಹುದಾಗಿದೆ ಎಂದರು. ಪ್ರಶಾಂತ್ ಹಿರೇಮಠ್, ಮಹೇಶ್, ಜೀವನ್, ಗೀತಾ, ರಮ್ಯ ಮೊದಲಾದವರು ಇದ್ದರು.

ಕೃಷಿಸಹಕಾರ ಸಂಘಕ್ಕೆ ಸಚಿವರ ಭೇಟಿ

ಚಾಮರಾಜನಗರ: ತಾಲ್ಲೂಕಿನ ಕಿಲಗೆರೆ ಗ್ರಾಮದ ವಿವಿದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿಸಹಕಾರ ಸಂಘಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಸಿ.ಪುಟ್ಟರಂಗಶೆಟ್ಟಿ ಭೇಟಿ, ನೀಡಿ, ಸಂಘದ ಅಧ್ಯಕ್ಷ ಕೆ.ಆರ್. ಬಸವರಾಜು ಅವರಿಂದ ಹಕ್ಕೋತ್ತಾಯಗಳ ಮನವಿಪತ್ರ ಸ್ವೀಕರಿಸಿದರು.

ರೈತರು ಕೃಷಿಚಟುವಟಿಕೆ ಕೈಗೊಳ್ಳಲು ಎಂಸಿಡಿಸಿಸಿ ಬ್ಯಾಂಕಿನಿಂದ ಹೊಸದಾಗಿ ಸಾಲಮಂಜೂರು ಮಾಡಿಸಿಕೊಡಬೇಕು, ಕಟ್ಟಡ ನವೀಕರಣ ಕಾರ್ಯಕ್ಕೆ 5ಲಕ್ಷ ರೂ. ಅನುದಾನ ಬಿಡುಗಡೆ ಮಾಡಿಸಿ ಕೊಡಬೇಕು ಎಂದು ಮನವಿಪತ್ರದಲ್ಲಿ ಒತ್ತಾಯಿಸಲಾಗಿದೆ. ತೆರಕಣಾಂಬಿ,ಕಿಲಗೆರೆ, ಯಾನಗಳ್ಳಿ, ಅರಕಲವಾಡಿ ಮಾರ್ಗ ಬಸ್‌ಗಳ ಸಮರ್ಪಕ ಸಂಚಾರಕ್ಕೆ ಕ್ರಮಕೈಗೊಳ್ಳಬೇಕು ಎಂದು ಗ್ರಾಮಸ್ಥರು ಸಚಿವರ ಗಮನಕ್ಕೆ ತಂದರು. ಇದೇವೇಳೆ ಜಿಲ್ಲಾ ಉಸ್ತುವಾರಿ ಸಚಿವ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ತಾವು ಸಲ್ಲಿಸಿರುವ ಹಕ್ಕೋತ್ತಾಯಗಳ ಬಗ್ಗೆ ಪರಿಶೀಲಿಸಿ, ಅಧಿಕಾರಿಗಳ ಜೂತೆ ಮಾತನಾಡಿ ಬಸ್ ವ್ಯವಸ್ಥೆ ಮಾಡಿಕೂಡುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ವಿವಿದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿಸಹಕಾರ ಸಂಘದ ನಿರ್ದೇಶಕರು, ಗ್ರಾಮಸ್ಥರು ಹಾಜರಿದ್ದರು.

ಮಹಿಳೆಯರಿಂದ ಬಾಗಿನ ಅರ್ಪಣೆ

ಚಾಮರಾಜನಗರ, ನಗರದ ಶ್ರೀ ಕಾಳಿಕಾಂಬಾ ದೇವಸ್ಥಾನ ಗೌರಿ ಗಣೇಶದ ಹಬ್ಬ ಪ್ರಯುಕ್ತ ಗೌರಿ ಗಣೇಶಮೂರ್ತಿಯನ್ನು ಪ್ರತಿಷ್ಠಾಪನೆ ವಿಶೇಷ ಪೂಜೆ ಸಲ್ಲಿಸಲಾಯಿತು.

ಗೌರಿ ಹಬ್ಬದ ಅಂಗವಾಗಿ ಪ್ರಾತಃ ಕಾಲ ಶ್ರೀ ಕಮಟೇಶ್ವರ ಸ್ವಾಮಿ ಸಮೇತ ಶ್ರೀ ಕಾಳಿಕಾಂಬಾ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು. ದೇವಸ್ಥಾನವನ್ನು ವಿವಿಧ ಬಗೆಯ ಹೂವುಗಳಿಂದ ಅಲಂಕೃತಗೊಳಿ

ಪೊಲೀಸರ ವಿರುದ್ಧವೂ ಪ್ರಕರಣ ದಾಖಲಿಗೆ ಆಗ್ರಹ

ಮೈಸೂರು: ನಂಜನಗೂಡು ತಾಲ್ಲೂಕಿನ ಹೊಸಕಡಜಟ್ಟಿ ಗ್ರಾಮದ ಮಹಿಳೆ ನವೀನ್ ಎಂಬಾತ ಮಾರಣಾಂತಿಕ ಹಲ್ಲೆ ಮಾಡಿದ ಕಾರಣ ಅಸ್ವಸ್ಥರಾಗಿ ಸಾವಿಗೀಡಾಗಿದ್ದಾರೆ. ಆದರೆ, ಈ ಪ್ರಕರಣ ಮುಚ್ಚಿ ಹಾಕಲು ಹಲವರು ಯತ್ನಿಸಿದ್ದು, ಇವರ ವಿರುದ್ಧ ಪೊಲೀಸರು ಎಫ್ಐಆರ್ ದಾಖಲಿಸಬೇಕು ಎಂದು ಕೇಂದ್ರದ ಮಾಜಿ ಸಚಿವ ಎ. ನಾರಾಯಣಸ್ವಾಮಿ ಆಗ್ರಹಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ದಲಿತ ಮಹಿಳೆ ಮಹದೇವಮ್ಮ ಅವರ ಮೇಲೆ ನವೀನ್ ತೀವ್ರ ಹಲ್ಲೆ ಮಾಡಿದ ಕಾರಣ ಅವರು ಅನಾರೋಗ್ಯಕ್ಕೀಡಾಗಿ ಆಸ್ಪತ್ರೆ ಸೇರಿದರೂ ನಂತರ ಬದುಕುಳಿಯಲಿಲ್ಲ. ಈ ಪ್ರಕರಣ ಮುಚ್ಚಿ ಹಾಕಲೆಂದು ಆರೋಪಿ ನಿಕಟ ವರ್ತಿಗಳು ಮಹದೇವಮ್ಮ ಅವರ ಕುಟುಂಬದವರಿಗೆ ಹಣದ ಆಮಿಷವೊಡ್ಡಿ 20 ಸಾವಿರ ರೂ. ಸಹಾ ನೀಡಿದ್ದರು. ಆದರೆ ಸಮುದಾಯದ ಸಂಘಟನೆಗಳು ಕ್ರಮ ವಹಿಸಿದ ಕಾರಣ ಪ್ರತಿಭಟನೆಗೆ ಮಣಿದು ಪೊಲೀಸರು ಎಫ್ಐಆರ್ ತೀರಾ ತಡವಾಗಿ ದಾಖಲಿಸಿದ್ದಾರೆ. ಹೀಗಿದ್ದರೂ ಆಮಿಷವೊಡ್ಡಿದವರ ವಿರುದ್ಧ ಪೊಲೀಸರೇಕೆ ಕ್ರಮ ಕೈಗೊಂಡಿಲ್ಲ ಎಂದು ಪ್ರಶ್ನಿಸಿದರು.

ಬಳಿಕ, ಈ ಹಿಂದೆ ಮಲ್ಲಿಕಾರ್ಜುನ ಖರ್ಗೆ ಅವರು ಸಚಿವರಾಗಿದ್ದ ವೇಳೆ ದಲಿತರ ಮಾರಣ ಹೋಮ ನಡೆಯಿತು. ಈಗ ಪ್ರಿಯಾಂಕ್ ಖರ್ಗೆ ಸಚಿವರಾಗಿರುವಾಗ ದಲಿತರ ಸರಣಿ ಹತ್ಯೆ ನಡೆಯುತ್ತಿವೆ. ರಾಜ್ಯದಲ್ಲಿ ದಲಿತರು, ಅದರಲ್ಲಿಯೂ ಮಾದಿಗರು ಸುರಕ್ಷಿತವಾಗಿಲ್ಲ. ಹೀಗಾಗಿ ಸಚಿವ ಪ್ರಿಯಾಂಕ್ ಖರ್ಗೆ ಈಗಲಾದರೂ ಗಮನ ಹರಿಸಿ, ಇಂತಹ ಪ್ರಕರಣಗಳಿಗೆ ಕಾರಣ ಏನು ಎಂಬ ಬಗ್ಗೆ ಪರಾಮರ್ಶೆ ಮಾಡಿ, ತಡೆಯಲು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು. ಅರಕಲವಾಡಿ ನಾಗೇಂದ್ರ, ಸಿದ್ದು, ಮಧುರಾಜ್, ಶ್ರೀನಿವಾಸ್ ಹಾಗೂ ಇನ್ನಿತರರು ಇದ್ದರು.

ಇಂದು ಫ್ಯಾಶನ್ ಶೋ, ಸಂಗೀತ ಕಾರ್ಯಕ್ರಮ

ಮೈಸೂರು: ಎ ಸ್ಟಾರ್ ಈವೆಂಟ್ಸ್ ವತಿಯಿಂದ ಇಂದು (ಸೆ.18) ಬೆಳಿಗ್ಗೆ 10ಕ್ಕೆ ಫ್ಯಾಶನ್ ಶೋ ಮತ್ತು ಸಂಜೆ 5.30ಕ್ಕೆ 'ವಿಷ್ಣು ಗಾನ; ಜಾನಕಿ ಧ್ಯಾನ' ಸಂಗೀತ ಕಾರ್ಯಕ್ರಮವನ್ನು ನಗರದ ಜಗನ್ಮೋಹನ ಪ್ಯಾಲೇಸ್‌ನಲ್ಲಿ ಏರ್ಪಡಿಸಲಾಗಿದೆ ಎಂದು ಎ ಸ್ಟಾರ್ ಈವೆಂಟ್ಸ್‌ನ ಸಂಸ್ಥಾಪಕ ಗಣೇಶ್ ಮೈಸೂರು ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಳಿಗ್ಗೆ 10ರಿಂದ ಸಂಜೆ 4ವರೆಗೆ ಮಕ್ಕಳಿಗೆ, ಮಹಿಳೆಯರಿಗೆ ಫ್ಯಾಶನ್ ಶೋ ನಡೆಯಲಿದೆ. ಫ್ಯಾಶನ್ ಶೋದಲ್ಲಿ ಭಾಗವಹಿಸುವವರಿಗೆ ಯಾವುದೇ ನೋಂದಣಿ ಇರುವುದಿಲ್ಲ, ಉಚಿತ ಪ್ರವೇಶವಿರಲಿದೆ ಎಂದು ಹೇಳಿದರು.

ಅದೇ ದಿನ ಸಂಜೆ 5ಕ್ಕೆ 'ವಿಷ್ಣುಗಾನ; ಜಾನಕಿ ಧ್ಯಾನ' ಶೀರ್ಷಿಕೆಯಡಿ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಿದ್ದು, ಚಿಕ್ಕಮಗಳೂರು ರಶ್ಮಿ, ವೀಣಾ ಜಯರಾಮ್, ವೀಣಾ ರೈ, ಶರತ್ ರಾಜ್, ವಿಜಯ್ ಅರಸ್ ಸೇರಿದಂತೆ ಮತ್ತಿತರರು ಡಾ.ವಿಷ್ಣುವರ್ಧನ್ ಅಭಿಯನ ಚಿತ್ರದ ಜಾನಕಿ ಅವರು ಹಾಡಿರುವ ಹಾಡುಗಳನ್ನು ಹಾಡಲಿದ್ದಾರೆ. ಜೊತೆಗೆ ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿಗೆ ಭಾಜನರಾಗಿರುವ ಅನಂತ್‌ನಾಗ್ ಅಭಿಯನಿಸಿದ ಚಿತ್ರದ ಕೆಲ ಹಾಡುಗಳನ್ನು ಹಾಡಲಿದ್ದಾರೆ ಎಂದು ಮಾಹಿತಿ ಹಂಚಿಕೊಂಡರು. ಈ ಕಾರ್ಯಕ್ರಮಕ್ಕೆ ಶಾಸಕ ಕೆ.ಹರೀಶ್ ಗೌಡ, ಯೂತ್ ಕಾಂಗ್ರೆಸ್ ಅಸೋಸಿಯೇಷನ್ ಅಧ್ಯಕ್ಷ ವಿಜಯ್ ಕುಮಾರ್, ಕರ್ನಾಟಕ ಸುಗಮ ಸಂಗೀತ ಪರಿಷತ್ ಮೈಸೂರು ಜಿಲ್ಲಾ ಘಟಕದ ಅಧ್ಯಕ್ಷ ಡಾ.ನಾಗರಾಜು ವಿ. ಬೈರಿ, ಆನಂದ್ ಶೆಟ್ಟಿ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ಹೇಳಿದರು. ಗಾಯಕರಾದ ವೀಣಾ ಜಯರಾಮ್, ಶ್ರೀಕಂಠ ರಾವ್, ಸ್ಮಿತಾ, ಸುದರ್ಶನ್, ವೀಣಾ ರೈ, ವಿಜಯ್ ಅರಸ್ ಸೇರಿ ಮತ್ತಿತರರು ಹಾಜರಿದ್ದರು.

ನಾಳೆ ಗುರು ನಮನ ಕಾರ್ಯಕ್ರಮ

ಮೈಸೂರು: ಹೆಸರಾಂತ ಗಾಯಕ ದಿ.ಮಡಿಕೇರಿ ನಾಗೇಂದ್ರ ಅವರ ಶಿಷ್ಯರು ಒಟ್ಟುಗೂಡಿ ಸೆ.19 ರಂದು ಸಂಜೆ 5.30ಕ್ಕೆ ನಗರದ ಗಾನ ಭಾರತಿಯಲ್ಲಿ ಗುರು ನಮನ ಕಾರ್ಯಕ್ರಮ ಆಯೋಜಿಸಿರುವುದಾಗಿ ಶಿಷ್ಯರಲ್ಲೊಬ್ಬರಾದ ಲತಾಶೇಖರ್ ತಿಳಿಸಿದರು. ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಡಾ.ಎಚ್.ಆರ್. ಲೀಲಾವತಿ, ಪ್ರೊ. ರಾಮಮೂರ್ತಿ ರಾವ್, ಗೀತಾ ಮಡಿಕೇರಿ ನಾಗೇಂದ್ರ ಅತಿಥಿಗಳಾಗಿರುವರು. ತಾವು, ರಾಧಿಕಾ ಮೋಹನ್, ಜಿ. ನಾಗರಾಜ್ ಇನ್ನಿತರರು ಹಾಡಲಿದ್ದೇವೆಂದರು. ಡಾ.ಪ್ರಹ್ಲಾದ್, ಕಲ್ಪನಾ ಸುರೇಶ್ ಜೈನ್ ಇನ್ನಿತರರು ಇದ್ದರು.

ಕಸಾಪ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಈಶ್ವರಪ್ಪ ಬಾಳೇಕುಂದ್ರಿ ಸ್ಪರ್ಧೆ

ಮೈಸೂರು: ಬರುವ ನವೆಂಬರ್‌ನಲ್ಲಿ ನಡೆಯುವ ಸಾಧ್ಯತೆ ಇರುವ ಕನ್ನಡ ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷರ ಸ್ಥಾನದ ಚುನಾವಣೆಗೆ ತಾವು ಸ್ಪರ್ಧಿಸುತ್ತಿದ್ದು, ಮತದಾರರು ತಮ್ಮನ್ನು ಆಯ್ಕೆ ಮಾಡುವ ಮೂಲಕ ಇದೇ ಮೊದಲ ಬಾರಿಗೆ ಮಹಿಳಾ ಅಧ್ಯಕ್ಷರು ಅಧಿಕಾರ ಅಲಂಕರಿಸುವ ಹಾಗೂ ತಾವು ಕನ್ನಡ ಸೇವೆ ಮಾಡುವ ಅವಕಾಶ ನೀಡಬೇಕೆಂದು ಖ್ಯಾತ ಹೃದ್ರೋಗ ತಜ್ಞ ಡಾ.ವಿಜಯಲಕ್ಷಿ ?ಮ ಈಶ್ವರಪ್ಪ ಬಾಳೇಕುಂದ್ರಿ ಮನವಿ ಮಾಡಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಕನ್ನಡದ ಸೇವೆಗೆ ಅನುಭವದ ಬಲ, ಕನ್ನಡದ ಭವಿಷ್ಯಕ್ಕೆ ಹೊಸ ಸಂಕಲ್ಪ, ಪರಂಪರೆಯ ಬೇರುಗಳನ್ನು ಗಟ್ಟಿಗೊಳಿಸಿ, ಹೊಸ ಚಿಗುರುಗಳನ್ನು ಅರಳಿಸುವುದು, ಇದಕ್ಕಾಗಿ ಎಲ್ಲರೂ ಒಲವಿನಿಂದ ಒಗ್ಗಟ್ಟಾಗಿ ಕನ್ನಡಾಂಬೆಯ ತೇರು ಎಳೆಯಬೇಕೆಂಬುದು ತಮ್ಮ ಆಶಯವಾಗಿದೆ. ಕನ್ನಡ ಸಾಹಿತ್ಯ ಪರಿಷತ್ ಕೇವಲ ಒಂದು ಸಂಸ್ಥೆಯಲ್ಲ, ಅದು ಕನ್ನಡಿಗರ ಅಸ್ಮಿತೆ, ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಪ್ರತಿನಿಧಿಸುವ ನಾಡಿನ ಹೆಮ್ಮೆಯ ಸಂಸ್ಥೆಯಾಗಿದೆ ಎಂದರು. ಸಾಹಿತ್ಯದೊಂದಿಗೆ ವಿಜ್ಞಾನ, ಶಿಕ್ಷಣ, ಆರೋಗ್ಯ, ತಂತ್ರಜ್ಞಾನ ಮತ್ತು ಸಮಕಾಲೀನ ಚಿಂತನೆಗಳನ್ನು ಬೆಸೆಯುವುದು, ಹಿರಿಯರ ಅನುಭವ ಮತ್ತು ಯುವಜನರ ಹೊಸ ಆಲೋಚನೆಗಳಿಗೆ ಸಮಾನ ವೇದಿಕೆ ಕಲ್ಪಿಸುವುದು, ಗ್ರಾಮೀಣ ಕನ್ನಡಿಗರಿಂದ ಜಾಗತಿಕ ಕನ್ನಡಿಗರವರೆಗೆ ಎಲ್ಲರನ್ನೂ ಒಳಗೊಳ್ಳುವ ಕ್ರಿಯಾಶೀಲ, ಜನಮುಖಿ ಪರಿಷತ್ ರೂಪಿಸಬೇಕೆಂಬುದು ತಮ್ಮ ಆಶಯವಾಗಿದೆ. ಹೀಗಾಗಿ ಮತದಾರರು ತಮ್ಮ ಕೈಹಿಡಿಯಬೇಕೆಂದು ಕೋರಿದರು. ಜಿ.ಆರ್. ನಾಗರಾಜ್, ಸೌಗಂಧಿಕಾ ಜೋಯಿಸ್, ಪ್ರೇಮಲೀಲಾ, ವೃಕ್ಷಂ ಸುರೇಶ್, ಡಾ.ಲಕ್ಷ್ಮಿದೇವಿ ಇದ್ದರು.



ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಲದ ಅಧ್ಯಕ್ಷರಾಗಿ ಏಳನೇ ಬಾರಿ ಅಧಿಕಾರ ಸ್ವೀಕರಿಸಿದ ಮಾಜಿ ಸಚಿವ ಹಾಗೂ ಶಾಸಕ ಜಿ.ಟಿ.ದೇವೇಗೌಡರನ್ನು ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ವತಿಯಿಂದ ಗೌರವಿಸಲಾಯಿತು. ಅಧ್ಯಕ್ಷ ಜೆ.ಯೋಗೇಶ್, ಉಪಾಧ್ಯಕ್ಷ ಟಿ.ರವಿ, ನಿರ್ದೇಶಕರಾದ ಎನ್.ಯೋಗಾನಂದ್,ಹೆಚ್. ಹರೀಶ್ ಕುಮಾರ್, ರಾಜಕೀಯ ರವಿಕುಮಾರ್, ಆರ್.ಸೋಮಣ್ಣ, ಕೆ.ಗಿರೀಶ್, ಪಡುವಾರಹಳ್ಳಿ ಎಂ.ರಾಮಕೃಷ್ಣ, ಪಿ.ರಾಜೇಶ್ವರಿ, ಪ್ರಮಿಳಾ ಕಾರ್ಯದರ್ಶಿ ಕೆ.ಹರ್ಷಿತ್ ಗೌಡ ಇದ್ದರು.

ಬಿಜೆಪಿಯಿಂದ ಚಾಮರಾಜೇಶ್ವರಸ್ವಾಮಿಗೆ ವಿಶೇಷಪೂಜೆ

ಚಾಮರಾಜನಗರ: ಪ್ರಧಾನಮಂತ್ರಿ ನರೇಂದ್ರಮೋದಿಯವರ 76ನೇವರ್ಷದ ಹುಟ್ಟುಹಬ್ಬದ ಅಂಗವಾಗಿ ಬಿಜೆಪಿ ನಗರಮಂಡಲ ಹಾಗೂ ಗ್ರಾಮಾಂತರ ಮಂಡಲ ವತಿಯಿಂದ ನಗರದ ಶ್ರೀಚಾಮರಾಜೇಶ್ವರ ದೇವಸ್ಥಾನದಲ್ಲಿ ವಿಶೇಷಪೂಜೆ ಪೂಜೆ ಸಲ್ಲಿಸಿ, ಮೋದಿಯವರಿಗೆ ಹುಟ್ಟುಹಬ್ಬದ ಶುಭಾಶಯ ಕೋರಲಾಯಿತು.

ನಂತರ ದೇವಸ್ಥಾನ ಮುಂಭಾಗದಲ್ಲಿ ನರೇಂದ್ರ ಮೋದಿ ಪರ ಜೈಕಾರ ಕೂಗಿ ಆಶೀರ್ವಾದದ ದೀಪ ಬೆಳಗಿಸಲಾಯಿತು. ಕಾರ್ಯಕ್ರಮದ ನೇತೃತ್ವ ವಹಿಸಿದ್ದ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್‌ಕುಮಾರ್ ಮಾತನಾಡಿ, ನಮ್ಮ ನೆಚ್ಚಿನ ಪ್ರಧಾನಮಂತ್ರಿಗಳಾದ ನರೇಂದ್ರಮೋದಿಯವರ ಹುಟ್ಟುಹಬ್ಬದ ಪ್ರಯುಕ್ತ ನಗರದ ಚಾಮರಾಜೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ, ದೀಪಹಚ್ಚಿ ನರೇಂದ್ರಮೋದಿ ಅವರಿಗೆ ದಿ ರ್ಘಾಯುಷ್ಯ, ಉತ್ತಮ ಆರೋಗ್ಯ ಕರುಣಿಸಿ, ಅವರಿಗೆ ಹೆಚ್ಚಿನ ಶಕ್ತಿಯನ್ನು ಕೊಟ್ಟು, ಅವರ ನವ ಭಾರತ ನಿರ್ಮಾಣ ಕನಸು ನನಸು ಮಾಡುವಂತಾಗಲಿ ಎಂದು ಪ್ರಾರ್ಥಿಸಲಾಯಿತು ಎಂದರು.

ನರೇಂದ್ರಮೋದಿ ಅವರ ನೇತೃತ್ವ ಸರ್ಕಾರದ ಪ್ರಮುಖ ಸಾಧನೆಗಳು ಮತ್ತು ಜನಪರ ಯೋಜನೆಗಳು ದೇಶದ ಆರ್ಥಿಕ, ಸಾಮಾಜಿಕ, ಮೂಲ ಸೌಕರ್ಯಗಳಲ್ಲಿ ಬದಲಾವಣೆಗಳನ್ನು ತಂದಿದ್ದು, ವಿಶ್ವಮಟ್ಟದಲ್ಲಿ ಗಮನ ಸೆಳೆದಿದ್ದು, ಭಾರತವನ್ನು ವಿದೇಶಿಗರು ತಿರುಗಿ ನೋಡುವಂತೆ ಮಾಡಿದ್ದಾರೆ ಎಂದರು.

ಪ್ರಧಾನಿ ಅವರು ನರೇಂದ್ರಮೋದಿ ಮುಖ್ಯ ಮಂತ್ರಿಯಾಗಿ, ಪ್ರಧಾನಮಂತ್ರಿಯಾಗಿ ಸಾರ್ವಜನಿಕ ಸೇವೆಯಲ್ಲಿ 25 ವರ್ಷಗಳನ್ನು ಪೂರೈಸುತ್ತಿದ್ದು, ಅವರ ಕಾರ್ಯಸಾಧನೆಯನ್ನು ಇಡೀ ವಿಶ್ವವೇ ಮೆಚ್ಚುವಂತದ್ದು, ದೇಶದ ಅಭಿವೃದ್ಧಿಗೆ ಎಲ್ಲ ಆಯಾಮಗಳಲ್ಲೂ ದೊಡ್ಡ ಕೊಡುಗೆ ನೀಡಿರುವುದು ಜಗತ್ ಜಾಹೀರಾತು ಆಗಿದೆ. ಸೆಪ್ಟೆಂಬರ್ 17 ರಿಂದ ಅಕ್ಟೋಬರ್ 17ರವರೆಗೆ ಒಂದು ತಿಂಗಳಕಾಲ ಸೇವಾ ಸಂಕಲ್ಪ ಅಭಿಯಾನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಮಾಜಿ ಸದಸ್ಯ ಪ್ರೊ.ಕೆ.ಆರ್.ಮಲ್ಲಿಕಾರ್ಜುನಪ್ಪ, ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ, ಎಸ್‌ಟಿ ಮೋರ್ಚಾದ ರಾಜ್ಯ ಉಪಾಧ್ಯಕ್ಷ ಜಯಸುಂದರ್, ಮುಖಂಡ ಡಾ. ಎ.ಆರ್.ಬಾಬು, ಕಾಡಾ ಮಾಜಿ ಅಧ್ಯಕ್ಷ ನಿಜಗುಣರಾಜು, ಓಬಿಸಿ ಮೋರ್ಚಾದ ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯ ನೂರೊಂದುಶೆಟ್ಟಿ, ಚೂಡಾ ಮಾಜಿ ಅಧ್ಯಕ್ಷ ಶಾಂತಮೂರ್ತಿ ಕುಲಗಾಣ ಬಿಜೆಪಿ ಜಿಲ್ಲಾ ಮಾಜಿ ಅಧ್ಯಕ್ಷರಾದ ನಾರಾಯಣಪ್ರಸಾದ್, ಆರ್.ಸುಂದರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿ.ವೃಷಭೇಂದ್ರಪ್ಪ, ಹೊನ್ನೂರು ಮಹದೇವಸ್ವಾಮಿ, ಜಿಲ್ಲಾ ಕಾರ್ಯದರ್ಶಿ ಸುಂದರ್‌ರಾಜ್, ನಗರಮಂಡಲ ಅಧ್ಯಕ್ಷ ಶಿವರಾಜ್, ಪ್ರಧಾನ ಕಾರ್ಯದರ್ಶಿ ಕೂಸಣ್ಣ, ಭಾಸ್ಕರ್, ಗ್ರಾಮಾಂತರ ಮಂಡಲ ಅಧ್ಯಕ್ಷ ಕಾಡಹಳ್ಳಿ ಕುಮಾರ್, ಪ್ರಧಾನ ಕಾರ್ಯದರ್ಶಿ ಪುರುಷೋತ್ತಮ, ಎಸ್ ಟಿ ಮೋರ್ಚಾದ ಜಿಲ್ಲಾಧ್ಯಕ್ಷ ಚಂದ್ರಶೇಖರ್, ಉಪಾಧ್ಯಕ್ಷ ಬುಲೆಟ್ ಚಂದ್ರು, ಜಿಲ್ಲಾ ಮಹಿಳಾ ಮೋರ್ಚಾದ ಅಧ್ಯಕ್ಷೆ ಕಮಲಮ್ಮ, ಪ್ರಧಾನ ಕಾರ್ಯದರ್ಶಿ ಶೈಲಾ, ಮುಖಂಡರಾದ ನಟರಾಜು, ಮೂಡ್ಲುಪುರ ನಂದೀಶ್, ಯುವ ಮೋರ್ಚಾದ ಪ್ರಧಾನ ಕಾರ್ಯದರ್ಶಿ ಆನಂದ್‌ಭಗೀರಥ, ನಗರ ಮಂಡಲ ಕಾರ್ಯದರ್ಶಿ ಬಂಗಾರನಾಯಕ, ನಗರಸಭಾ ಮಾಜಿ ಸದಸ್ಯ ಶಿವಣ್ಣ, ಮುಖಂಡರಾದ ಎಂ.ಎಸ್.ಚಂದ್ರಶೇಖರ್, ಸುಂದರಪ್ಪ, ಮಹೇಶ್‌ಪಟೇಲ್, ಕೃಷ್ಣ ಇತರರು ಹಾಜರಿದ್ದರು

ವಿಶ್ವಕರ್ಮ ಜಯಂತಿ

ವಿಶ್ವಕರ್ಮ ಸಮಾಜದ ಅಭಿವೃದ್ಧಿಗೆ ಶಿಕ್ಷಣವೇ ಬಲ: ತನ್ಮಯ್

ಗುಂಡ್ಲುಪೇಟೆ: ವಿಶ್ವಕರ್ಮ ಸಮಾಜದ ಸಾಂಪ್ರದಾಯಿಕ ಕಲೆ, ಕೌಶಲ್ಯ ಹಾಗೂ ವೃತ್ತಿಪರ ಕ್ಷೇತ್ರಗಳ ಕೊಡುಗೆ ಸಮಾಜಕ್ಕೆ ಅನನ್ಯವಾಗಿದೆ. ಸಮುದಾಯದ ಮಕ್ಕಳು ಹೆಚ್ಚಿನ ಶಿಕ್ಷಣ ಪಡೆದು ವಿದ್ಯಾವಂತರಾಗುವ ಮೂಲಕ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಪ್ರಗತಿ ಸಾಧಿಸಬೇಕು ಎಂದು ತಹಶೀಲ್ದಾರ್ ಎಂ.ಎಸ್. ತನ್ಮಯ್ ಹೇಳಿದರು. ಪಟ್ಟಣದ ತಾಲೂಕು ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಆಯೋಜಿಸಿದ್ದ ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಮರದ ಕೆತ್ತನೆ, ಚಿನ್ನದ ಕೆಲಸ ಸೇರಿದಂತೆ ವಿವಿಧ ಸಾಂಪ್ರದಾಯಿಕ ಕಲೆಗಳಲ್ಲಿ ವಿಶ್ವಕರ್ಮ ಸಮುದಾಯದವರು ಪರಿಣತಿ ಹೊಂದಿದ್ದು, ತಮ್ಮ ಕೈಚಳಕದ ಮೂಲಕ ಹಲವು ಕ್ಷೇತ್ರಗಳಿಗೆ ಕೊಡುಗೆ ನೀಡುತ್ತಿದ್ದಾರೆ ಎಂದರು. ಸೃಜನಶೀಲತೆ ಹಾಗೂ ಕೌಶಲ್ಯಕ್ಕೆ ಸಮಾಜದಲ್ಲಿ ಮಹತ್ವದ ಸ್ಥಾನವಿದ್ದು, ವಿಶ್ವಕರ್ಮ ಸಮುದಾಯದ ಪರಂಪರೆ ವಿಶಿಷ್ಟವಾಗಿದೆ. ಈ ಪರಂಪರೆಯನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸುವುದರ ಜೊತೆಗೆ ಆಧುನಿಕ ಶಿಕ್ಷಣಕ್ಕೂ ಆದ್ಯತೆ ನೀಡಬೇಕು ಎಂದು ಅವರು ತಿಳಿಸಿದರು.

ತಾಲೂಕು ಮಟ್ಟದ ಜಯಂತಿ

ತಾಲೂಕು ಮಟ್ಟದ ವಿಶ್ವಕರ್ಮ ಜಯಂತಿ ಇದೇ ತಿಂಗಳ 30ರಂದು ನಡೆಯಲಿದ್ದು, ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಮಾಜದ ಎಲ್ಲರೂ ಸಹಕರಿಸುವಂತೆ ಆಯೋಜಕರು ಮನವಿ ಮಾಡಿದರು. ಈ ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಟಿ.ಆರ್. ಸ್ವಾಮಿ, ಚೆಸ್ಕಾಂ ಎಇಇ ಸಿದ್ದಲಿಂಗಪ್ಪ ಸೌಭಾಗ್ಯ, ಮಹೇಶ್ ಕಬ್ಬಹಳ್ಳಿ, ಪ್ರಭು, ಪುಟ್ಟಣ್ಣ, ವೆಂಕಟಾಚಾರಿ, ದೊರೆಸ್ವಾಮಿ, ನಾಗೇಂದ್ರ, ರವಿ, ಸಿದ್ದರಾಜು, ಮಣಿ, ಮಾದೇವಚಾರಿ, ಮೂಕಳ್ಳಿ ಮಾದೇವಸ್ವಾಮಿ, ನಂಜುಂಡಚಾರಿ ಸೇರಿದಂತೆ ಸಮಾಜದ ಹಲವು ಮುಖಂಡರು ಹಾಗೂ ಇತರರು ಉಪಸ್ಥಿತರಿದ್ದರು.

ಶಿಕ್ಷಣಕ್ಕೆ ಒತ್ತು

ಮುಖ್ಯ ಭಾಷಣಕಾರ ರಂಗೇಗೌಡ ಮಾತನಾಡಿ, ವಿಶ್ವಕರ್ಮರ ಇತಿಹಾಸ, ಪರಂಪರೆ ಹಾಗೂ ಸಮಾಜದ ಭವಿಷ್ಯದ ಕುರಿತು ವಿವರಿಸಿದರು. ಪೌರಾಣಿಕ ನಂಬಿಕೆಗಳಲ್ಲಿ ವಿಶ್ವಕರ್ಮರನ್ನು ಜಗತ್ತಿನ ಸೃಷ್ಟಿಕರ್ತ ಹಾಗೂ ನಿರ್ಮಾತೃ ಎಂದು ಗುರುತಿಸಲಾಗಿದ್ದು, ವಿವಿಧ ಯುಗಗಳಲ್ಲಿ ಪ್ರಮುಖ ನಗರಗಳು ಮತ್ತು ಲೋಕಗಳ ನಿರ್ಮಾಣದೊಂದಿಗೆ ವಿಶ್ವಕರ್ಮರ ಹೆಸರನ್ನು ಜೋಡಿಸಲಾಗಿದೆ ಎಂದರು. ವಿಶ್ವಕರ್ಮ ಅಭಿವೃದ್ಧಿ ನಿಗಮ ಸ್ಥಾಪನೆಗಾಗಿ ಕೆ.ಪಿ. ನಂಜುಂಡಿ ನಡೆಸಿದ ಹೋರಾಟದ ಫಲವಾಗಿ ನಿಗಮ ಸ್ಥಾಪನೆಯಾಗಿದೆ. ಅವರ ಸಂಘಟನಾ ಪ್ರಯತ್ನಗಳಿಂದ ಸಮುದಾಯದ ಹಲವು ವಿಚಾರಗಳು ಮುನ್ನೆಲೆಗೆ ಬಂದಿವೆ ಎಂದು ಹೇಳಿದರು. ಭಾರತದ ಸಂವಿಧಾನ ಎಲ್ಲರಿಗೂ ಸಮಾನ ಅವಕಾಶಗಳನ್ನು ಕಲ್ಪಿಸಿದ್ದು, ಸಮುದಾಯದ ಪ್ರತಿಯೊಬ್ಬರೂ ತಮ್ಮ ಹಕ್ಕುಗಳನ್ನು ಅರಿತು ಶಿಕ್ಷಣ ಮತ್ತು ಅಭಿವೃದ್ಧಿಯತ್ತ ಗಮನಹರಿಸಬೇಕು ಎಂದು ಅವರು ಕರೆ ನೀಡಿದರು.

ನಾಳೆ ಬನ್ನಿಕುಪ್ಪೆ ಶ್ರೀ ದತ್ತಾತ್ರೇಯ ದೇವಾಲಯದಲ್ಲಿ ದತ್ತ ಉಪಾಸನೆ

ರಾಮನಗರ: ಇದೇ ಸೆ.19ರ ಶನಿವಾರ ತಾಲ್ಲೂಕಿನ ಕೈಲಾಂಚ ಹೋಬಳಿಯ ಬನ್ನಿಕುಪ್ಪೆ ಗ್ರಾಮದಲ್ಲಿರುವ ಶ್ರೀ ದತ್ತಾತ್ರೇಯ ದೇವಾಲಯದಲ್ಲಿ 2026ನೇ ಸಾಲಿನ ನಾದ–ವೇದಗಳ ಸಂಗಮ "ಗುಡಿ ನಮನ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

"ವೇದ" ಕಾರ್ಯಕ್ರಮದಡಿ ವೇದಮಾತ ಗಾಯತ್ರಿ ಮಾತೆಯ ತ್ರಿಕಾಲ ಜಪ ನಡೆಯಲಿದೆ. "ನಾದ" ಕಾರ್ಯಕ್ರಮದಡಿಯಲ್ಲಿ ಗಾನಕಲಾಶ್ರೀ ವಿದ್ವಾನ್ ಟಿ.ಎಸ್.ಪಟ್ಟಾಭಿರಾಮ ಪಂಡಿತ್ ನೇತೃತ್ವದಲ್ಲಿ ಸಂಗೀತ ಕಾರ್ಯಕ್ರಮ ಬೆಳಿಗ್ಗೆ 9 ರಿಂದ ರಾತ್ರಿ 9ರವರೆಗೆ ನಡೆಯಲಿದೆ. ಅಂದು ಬೆಳಿಗ್ಗೆ 4 ಗಂಟೆಗೆ ಕಾಕಡಾರತ್ರಿಯಿಂದ ದತ್ತ ಉಪಾಸನೆ ಆರಂಭವಾ

ಮಧ್ವಾಚಾರ್ಯರ ಜಯಂತಿಯನ್ನು ರಾಜ್ಯ ಸರ್ಕಾರದ ವತಿಯಿಂದ ಆಚರಿಸಿ

ಸಿಎಂ ಡಿಕೆಶಿ ಗೆ ಜಿಲ್ಲಾ ಬ್ರಾಹ್ಮಣ ಸಂಘ ಮನವಿ

ಕಲಬುರಗಿ: ದ್ವೈತ ಸಿದ್ಧಾಂತ ಪ್ರತಿಪಾದಕರಾದ ಜಗದ್ಗುರು ಶ್ರೀ ಮಧ್ವಾಚಾರ್ಯರ ಜಯಂತಿಯನ್ನು ರಾಜ್ಯ ಸರ್ಕಾರದ ವತಿಯಿಂದ ಆಚರಿಸುವಂತೆ ಜಿಲ್ಲಾ ಬ್ರಾಹ್ಮಣ ಸಂಘದ ಪ್ರಮುಖರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ

ಗೃಹ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಯವರಿಗೆ ಮನವಿ ಸಲ್ಲಿಸಿದ್ದಾರೆ.

ನಗರದ ಐವಾನ್ ಇ ಶಾಹಿ ಅತಿಥಿಗೃಹದಲ್ಲಿ ಬ್ರಾಹ್ಮಣ ಸಮಾಜದ ನಿಯೋಗ ಈ ಕುರಿತು ಸಿಎಂ ಮತ್ತು ಗೃಹ ಸಚಿವರನ್ನು ಭೇಟಿ ಮಾಡಿ ಚರ್ಚೆ ನಡೆಸಿತು.

ಭಾರತೀಯ ಸನಾತನ ಧರ್ಮ, ತತ್ತ್ವಶಾಸ್ತ್ರ, ಆಧ್ಯಾತ್ಮಿಕತೆ ಹಾಗೂ ಕರ್ನಾಟಕದ ಧಾರ್ಮಿಕ ಮತ್ತು ಸಾಂಸ್ಕೃತಿಕ ಪರಂಪರೆಗೆ ಶ್ರೀ ಮಧ್ವಾಚಾರ್ಯರು ಅಪಾರ ಕೊಡುಗೆ ನೀಡಿದ್ದಾರೆ. ಕನ್ನಡದ ಆಚಾರ್ಯರಾಗಿರುವ ಶ್ರೀ ಮಧ್ವಾಚಾರ್ಯರ ತತ್ತ್ವ, ವಿಚಾರಧಾರೆ ಮತ್ತು ಆದರ್ಶಗಳನ್ನು ಮಧ್ವ ಪರಂಪರೆಯ ಆಚಾರ್ಯರು, ಮಠಾಧೀಶರು ಹಾಗೂ ಭಕ್ತರು ಇಂದಿಗೂ ನಿರಂತರವಾಗಿ ಸಮಾಜದಲ್ಲಿ ಪ್ರಚಾರಪಡಿಸುತ್ತಿದ್ದಾರೆ. ಅವರು ಪ್ರತಿಪಾದಿಸಿದ ದ್ವೈತ ಸಿದ್ಧಾಂತವು ಕರ್ನಾಟಕದ ಮಾತ್ರವಲ್ಲದೆ ದೇಶದಾದ್ಯಂತ ಧಾರ್ಮಿಕ ಹಾಗೂ ತತ್ತ್ವಶಾಸ್ತ್ರೀಯ ಕ್ಷೇತ್ರದಲ್ಲಿ ಮಹತ್ವದ ಸ್ಥಾನವನ್ನು ಹೊಂದಿದೆ. ಅವರ ಪರಂಪರೆಯು ಧಾರ್ಮಿಕ ಜ್ಞಾನ, ನೈತಿಕ ಮೌಲ್ಯಗಳು, ಆಧ್ಯಾತ್ಮಿಕ ಚಿಂತನೆ ಮತ್ತು ಸಾಂಸ್ಕೃತಿಕ ಪರಂಪರೆಯ ಸಂರಕ್ಷಣೆಯಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ.

ಈ ಹಿನ್ನೆಲೆಯಲ್ಲಿ, ಪ್ರತಿವರ್ಷ ವಿಜಯದಶಮಿ ದಿನ ಬರುವ ಜಗದ್ಗುರು ಶ್ರೀ ಮಧ್ವಾಚಾರ್ಯರ ಜಯಂತಿಯನ್ನು ಕರ್ನಾಟಕ ಸರ್ಕಾರದ ವತಿಯಿಂದ ರಾಜ್ಯ ಮಟ್ಟದಲ್ಲಿ ಅಧಿಕೃತವಾಗಿ ಆಚರಿಸುವಂತೆ ಸಿಎಂ ಮತ್ತು ಗೃಹ ಸಚಿವರಿಗೆ ಮುಖಂಡರು ಆಗ್ರಹಿಸಿದ್ದಾರೆ. ಜಯಂತಿಯ ಅಂಗವಾಗಿ ಸರ್ಕಾರದ ವತಿಯಿಂದ ಅಧಿಕೃತ ಕಾರ್ಯಕ್ರಮ ಆಯೋಜಿಸಿ, ಶ್ರೀ ಮಧ್ವಾಚಾರ್ಯರ ಜೀವನ, ತತ್ತ್ವಶಾಸ್ತ್ರ ಹಾಗೂ ಕೊಡುಗೆಗಳ ಕುರಿತು ವಿಚಾರ ಸಂಕಿರಣ, ಉಪನ್ಯಾಸ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ, ಅವರ ಮಹಾನ್ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸಲು ಸಂಬಂಧಿಸಿದ ಇಲಾಖೆಗೆ ಅಗತ್ಯ ನಿರ್ದೇಶನ ನೀಡಿ, ಜಗದ್ಗುರು ಶ್ರೀ ಮಧ್ವಾಚಾರ್ಯರ ಜಯಂತಿಯನ್ನು ಕರ್ನಾಟಕ ಸರ್ಕಾರದ ವತಿಯಿಂದ ಅಧಿಕೃತವಾಗಿ ಆಚರಿಸಲು ಸೂಕ್ತಕ್ರಮ ಕೈಗೊಳ್ಳುವಂತೆ ಉತ್ತರಾದಿ ಮಠದ ಮಠಾಧಿಕಾರಿ ರಾಮಾಚಾರ್ಯ ಘಂಟಿ, ಪಂ. ಡಾ. ಗುರುಮಧ್ವಾಚಾರ್ಯ ನವಲಿ,ಆನಂದತೀರ್ಥಾಚಾರ್ಯ ಜೋಶಿ, ಲಕ್ಷ್ಮಣಾಚಾರ್ಯ, ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಪಾಂಡುರಂಗ ದೇಶಮುಖ, ಪ್ರಧಾನ ಕಾರ್ಯದರ್ಶಿ ಪ್ರಶಾಂತ ಕೋರಳ್ಳಿ ವಕೀಲರು, ಹಿರಿಯ ಪತ್ರಕರ್ತ ಶೇಷಮೂರ್ತಿ ಅವಧಾನಿ, ಯುವ ಬಿಜೆಪಿ ಮುಖಂಡ ಶ್ರೀನಿವಾಸ್ ಜಿ. ದೇಸಾಯಿ, ರಘೂತ್ತಮ ಘಂಟಿ, ಭರತ ಕುಲಕರ್ಣಿ, ಸೇರಿದಂತೆ ಹಲವರಿದ್ದ ನಿಯೋಗ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದೆ.

ಇಂದಿನಿಂದ ಎಚ್.ಆರ್. ದಸರಾ ಸಂಭ್ರಮ

ಮೈಸೂರು: ಮೈಸೂರು ಸಿಎಚ್ಆರ್ಒ ಪೋರಂ, ಎಡಿನ್ ಫೌಂಡೇಷನ್, ಅಪೊಲೊ ಆಸ್ಪತ್ರೆ ಮೈಸೂರು ಘಟಕ, ರಿಷಿ ಎಫ್ಐಬಿಸಿ ಸೇರಿ ವಿವಿಧ ಸಂಸ್ಥೆಗಳ ಸಹಯೋಗದೊಂದಿಗೆ ಎಚ್ಆರ್ ಮತ್ತು ಕೈಗಾರಿಕಾ ಸಮೃದ್ಧಿಯ ಅವಲೋಕನ ಎಂಬ ಧ್ಯೇಯವಾಕ್ಯದೊಂದಿಗೆ ಸೆ.18ರಿಂದ 9 ದಿನಗಳವರೆಗೆ ?ಎಚ್ಆರ್ ದಸರಾ–2026? ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಮೈಸೂರು ಸಿಎಚ್ಆರ್ಒ ಪೋರಂ ಅಧ್ಯಕ್ಷ ಬಿ.ಎಂ. ಗೌತಮ್ ಹೇಳಿದರು.

ನಗರದ ಖಾಸಗಿ ಹೋಟೆಲ್ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆ.18ರಂದು ಹೆಬ್ಬಾಳು ಕೈಗಾರಿಕಾ ಪ್ರದೇಶದಲ್ಲಿ ಎಚ್ಆರ್ ವೃತ್ತಿಪರರು ಮತ್ತು ಶಿಕ್ಷಣ ತಜ್ಞರ ಕೈಗಾರಿಕಾ ಭೇಟಿ , ಸೆ.26ರಂದು ಕಡಕೊಳದ ಶೇಷಾದ್ರಿಪುರಂ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯಲ್ಲಿ ವಿದ್ಯಾರ್ಥಿಗಳಿಗೆ ಕಾರ್ಪೊರೇಟ್ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮ, ಅಕ್ಟೋಬರ್ 9ರಂದು ಜೂಮ್ ಮತ್ತು ಯೂಟ್ಯೂಬ್ ನಲ್ಲಿ ಆನ್ಲೈನ್ ಎಚ್ಆರ್ ಚರ್ಚಾ ಅಧಿವೇಶನ ಎಚ್ಆರ್ ವರ್ಚುವಲ್ ಚರ್ಚಾಕೂಟ ನಡೆಯಲಿದೆ. ಅ.11ರಂದು ಹೆಬ್ಬಾಳಿನ ಮೈಸೂರು ಕೌಂಟಿ ರಿಟ್ರೀಟ್ನಲ್ಲಿ ಅವಕಾಶ ವಂಚಿತ ಮಕ್ಕಳೊಂದಿಗೆ ದಸರಾ ಸಂಭ್ರಮ ಮೆಗಾ ವಿಶ್ ಬಾಕ್ಸ್, ಅ.16ರಂದು ಜಿಎಸ್ಎಸ್ಎಸ್ನ ಎಂಬಿಎ ವಿಭಾಗದಲ್ಲಿ ಅತ್ಯುತ್ತಮ ಎಚ್ಆರ್ ಮತ್ತು ಕಾರ್ಯಾಚರಣೆಗಳ ಸಮಾವೇಶ , ಅ.25ರಂದು ಅರಮನೆಯ ಬಲರಾಮ ದ್ವಾರದಲ್ಲಿ ಎಚ್ಆರ್ ವೃತ್ತಿಪರರು ಮತ್ತು ಶಿಕ್ಷಣ ತಜ್ಞರಿಂದ ಮೈಸೂರು ನಗರ ಸ್ವಚ್ಛತಾ ಅಭಿಯಾನ, ನವೆಂಬರ್ 7ರಂದು ಹೆಬ್ಬಾಳದಲ್ಲಿರುವ ಮೈಸೂರು ಕೌಂಟಿ ರಿಟ್ರೀಟ್ನಲ್ಲಿ ಎಚ್ಆರ್ ವೃತ್ತಿಪರರು ಮತ್ತು ಉದ್ಯಮ ನಾಯಕರ ಸಮಾವೇಶ, ನ.15ರಂದು ಮೈಸೂರಿನ ಅಪೊಲೊ ಬಿಜಿಎಸ್ ಆ?ಪಸ್ಪತ್ರೆಯಲ್ಲಿ ಎಚ್ಆರ್ ವೃತ್ತಿಪರರು ಮತ್ತು ಅವರ ಕುಟುಂಬಗಳಿಗೆ ಆರೋಗ್ಯ ತಪಾಸಣೆ, ನ.27ರಂದು ಎಸ್ಡಿಎಂ ಐಎಂಡಿ ಕಾಲೇಜಿನಲ್ಲಿ ಎಚ್ಆರ್ ದಸರಾ ಸಮಾರೋಪ ಸಮಾರಂಭ ನಡೆಯಲಿದೆ ಎಂದು ಹೇಳಿದರು.

ಅಪೊಲೊ ಆಸ್ಪತ್ರೆಯ ಹಿರಿಯ ಉಪಾಧ್ಯಕ್ಷ ಎನ್.ಜಿ.ಭರತೀಶ ರೆಡ್ಡಿ ಮಾತನಾಡಿ, ಎಚ್ಆರ್ ದಸರಾ–2026? ಕಾರ್ಯಕ್ರಮದ ಮೂಲಕ ಸಮಾಜದಲ್ಲಿ ಒಳ್ಳೆಯ ಕೆಲಸವನ್ನು ಈ ಸಂಘಟನೆಗಳು ಮಾಡುತ್ತಿವೆ. ತಮ್ಮ ಕಡೆಯಿಂದ ಸಹಕಾರ ನೀಡಲಾಗುವುದು ಎಂದರು. ಜಿಆರ್ಎಸ್ ಫ್ಯಾಂಟಸಿ ಪಾರ್ಕ್ನ ಜನರಲ್ ಮ್ಯಾನೇಜರ್ ಕೆ.ಟಿ.ಶ್ರೀನಿವಾಸನ್, ಎಡಿನ್ ಫೌಂಡೇಷನ್ ಉಪಾಧ್ಯಕ್ಷೆ ಜಿ.ಪಿ.ಬಿಂದು ಮತ್ತಿತರರು ಸುದ್ದಿಗೋಷ್ಠಿಯಲ್ಲಿ ಹಾಜರಿದ್ದರು.

ನಾಳೆ 'ಕೌದಿ' ಏಕವ್ಯಕ್ತಿ ನಾಟಕ ಪ್ರದರ್ಶನ

ಮೈಸೂರು: ನಗರದ ಜೆಎಲ್ ಬಿ ರಸ್ತೆಯ ಹಾರ್ಡ್ವಿಕ್ ಶಾಲಾ ಆವರಣದಲ್ಲಿರುವ ಭಾರತೀಯ ಶೈಕ್ಷಣಿಕ ರಂಗಭೂಮಿ ಸಂಸ್ಥೆಯಲ್ಲಿ ಸೆಪ್ಟೆಂಬರ್ 18ರಂದು ಸಂಜೆ 6 ಗಂಟೆಗೆ

'ಕೌದಿ' ಏಕವ್ಯಕ್ತಿ ನಾಟಕ ಪ್ರದರ್ಶನ ಏರ್ಪಡಿಸಲಾಗಿದೆ. ಗಣೇಶ ಅಮೀನಗಡ ರಚನೆಯ ಈ ನಾಟಕಕ್ಕೆ ಸಂಗೀತ ನೀಡಿ, ವಿನ್ಯಾಸಗೊಳಿಸಿ ನಿರ್ದೇಶನ ನೀಡಿದವರು ಜಗದೀಶ್ ಆರ್ ಜಾಣಿ. ಭಾಗ್ಯಶ್ರೀ ಬಿ.ಪಾಳಾ ಅಭಿನಯಿಸಿದರು. ನಗರದ ಕವಿತಾ ಕಲಾ ತಂಡವು ಪ್ರಸ್ತುತಪಡಿಸುವ ಈ ನಾಟಕಕ್ಕೆ ಉಚಿತ ಪ್ರವೇಶವಿದೆ ಎಂದು ಪ್ರಕಟಣೆ ತಿಳಿಸಿದೆ.

ಕ್ರೀಡಾಕೂಟದಲ್ಲಿ ಸಂಭ್ರಮಿಸಿದ ಪೌರಬಂಧುಗಳು

ಮೈಸೂರು: ಮಹಾನಗರ ಪಾಲಿಕೆಯ ವತಿಯಿಂದ ಪೌರಕಾರ್ಮಿಕರ ದಿನಾಚರಣೆಯ ಅಂಗವಾಗಿ ಪೌರಕಾರ್ಮಿಕರು ಹಾಗೂ ಸ್ವಚ್ಛತಾ ಮೇಲ್ವಿಚಾರಕರಿಗಾಗಿ ಆಯೋಜಿಸಿದ್ದ ಕ್ರೀಡಾಕೂಟದಲ್ಲಿ ಎಲ್ಲರೂ ಭಾಗವಹಿಸಿ ಸಂಭ್ರಮಿಸಿದರು.

ಮಹಾನಗರ ಪಾಲಿಕೆ ಆಯುಕ್ತೆ ಎಂ.ಕೆ.ಸವಿತಾ ಹಾಗೂ ಹೆಚ್ಚುವರಿ ಆಯುಕ್ತೆ ವೀಣಾ ಕ್ರೀಡಾಕೂಟವನ್ನು ಉದ್ಘಾಟಿಸಿದರು. ನಗರದ ಎಲ್ಲ ವಲಯಗಳ ಪೌರಕಾರ್ಮಿಕರು ಮತ್ತು ಸ್ವಚ್ಛತಾ ಮೇಲ್ವಿಚಾರಕರು ಹೆಚ್ಚಿನ ಸಂಖ್ಯೆಯಲ್ಲಿ ಉತ್ಸಾಹದಿಂದ ಪಾಲ್ಗೊಂಡಿದ್ದರು.

ಪುರುಷರು ಮತ್ತು ಮಹಿಳೆಯರಿಗಾಗಿ 100 ಮೀಟರ್ ಓಟ ಹಾಗೂ ಗುಂಡು ಎಸೆತ ಸ್ಪರ್ಧೆಗಳನ್ನು ನಡೆಸಲಾಯಿತು. ಕೆರೆದಡ, ಸಂಗೀತ ಕುರ್ಚಿ, ಕೊಕ್ಕರೆ ಆಟ, ನಿಂಬೆಹಣ್ಣುಚಮಚ ಓಟ ಮತ್ತು ಹಗ್ಗಜಗ್ಗಾಟ ಸೇರಿದಂತೆ ವಿವಿಧ ವಿನೋದ ಕ್ರೀಡೆಗಳನ್ನು ಆಯೋಜಿಸಲಾಗಿತ್ತು. ಇದರೊಂದಿಗೆ ಕ್ರಿಕೆಟ್ ಪಂದ್ಯಾವಳಿಯನ್ನೂ ನಡೆಸಲಾಯಿತು.

ಪೌರಕಾರ್ಮಿಕರ ದೈಹಿಕ ಆರೋಗ್ಯ, ಮಾನಸಿಕ ಉಲ್ಲಾಸ, ಕ್ರೀಡಾಸ್ಫೂರ್ತಿ ಹಾಗೂ ಪರಸ್ಪರ ಒಗ್ಗಟ್ಟನ್ನು ಉತ್ತೇಜಿಸುವ ಉದ್ದೇಶದಿಂದ ಕ್ರೀಡಾಕೂಟವನ್ನು ಆಯೋಜಿಸಲಾಗಿತ್ತು. ಪೌರಕಾರ್ಮಿಕರು ಎಲ್ಲ ಸ್ಪರ್ಧೆಗಳಲ್ಲಿ ಅತ್ಯಂತ ಉತ್ಸಾಹದಿಂದ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಕಾರ್ಯಕ್ರಮದಲ್ಲಿ ಕಾರ್ಯನಿರ್ವಾಹಕ ಅಭಿಯಂತರ ಮೃತ್ಯುಂಜಯ ಇತರರು ಉಪಸ್ಥಿತರಿದ್ದರು.

ಶ್ರೀ ಭಗವಾನ್ ವಿಶ್ವಕರ್ಮರ ಆರಾಧನೆಗೆ ಆದ್ಯತೆ ನೀಡಿ: ಎಚ್.ಬಿ.ಲಿಂಗಮೂರ್ತಿ

ಮಡಿಕೇರಿ: ವಿಶ್ವಕರ್ಮರು ಕೇವಲ ಒಂದು ವ್ಯಕ್ತಿಯಲ್ಲ, ಇಡೀ ಬ್ರಹ್ಮಾಂಡದ ಸೃಷ್ಟಿಗೆ ರೂಪ ನೀಡಿದ ಶಕ್ತಿ. ಆದ್ದರಿಂದ ವಿಶ್ವಕರ್ಮ ಜಯಂತಿಯನ್ನು ಕೇವಲ ಒಂದು ಸಮುದಾಯಕ್ಕೆ ಸೀಮಿತಗೊಳಿಸದೆ, ವಿಶ್ವಕರ್ಮರ ಆರಾಧನೆಯನ್ನು ಸಾರ್ವತ್ರಿಕವಾಗಿ ಪೂಜಾ ಮಹೋತ್ಸವದ ರೂಪದಲ್ಲಿ ಆಚರಿಸಬೇಕು ಎಂದು ಕುಶಾಲನಗರದ ನಿವೃತ್ತ ಪ್ರಾಂಶುಪಾಲರಾದ ಎಚ್.ಬಿ.ಲಿಂಗಮೂರ್ತಿ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ನಗರದ ಗಾಂಧಿ ಭವನದಲ್ಲಿ ಗುರುವಾರ ನಡೆದ ಶ್ರೀ ಭಗವಾನ್ ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು

ವಿಶ್ವಕರ್ಮರು ಇಡೀ ಜಗತ್ತಿನ ಹಾಗೂ ಬ್ರಹ್ಮಾಂಡದ ಸೃಷ್ಟಿಕರ್ತರೆಂದು ಭಾರತೀಯ ಪರಂಪರೆಯಲ್ಲಿ ನಂಬಲಾಗಿದೆ. ಜಗತ್ತಿನಲ್ಲಿ ಏನೂ ಇಲ್ಲದ ಶೂನ್ಯ ಸ್ಥಿತಿಯಿಂದ ಸೃಷ್ಟಿ ಕಾರ್ಯವನ್ನು ಆರಂಭಿಸಿ, ರಸತತ್ವದಿಂದ ಜಲತತ್ವವನ್ನು ರೂಪಿಸಿ, ಅದನ್ನು ಪೃಥ್ವಿ ತತ್ವಕ್ಕೆ ತಂದವರು ವಿಶ್ವಕರ್ಮ ಎಂಬ ನಂಬಿಕೆಯಿದೆ ಎಂದು ಹೇಳಿದರು.

ವಿಶ್ವಕರ್ಮರು ನಿರ್ದಿ?ಟ ವ್ಯಕ್ತಿಗೆ ಅಥವಾ ಒಂದು ಸಮುದಾಯಕ್ಕೆ ಮಾತ್ರ ಸೀಮಿತವಾದವರಲ್ಲ. ಇಡೀ ಜಗತ್ತಿನ ಸೃಷ್ಟಿಶಕ್ತಿಯ ಪ್ರತೀಕವಾಗಿರುವುದರಿಂದ ಎಲ್ಲರೂ ಅವರನ್ನು ಗೌರವಿಸಿ ಆರಾಧಿಸಬೇಕು ಎಂದು ಅಭಿಪ್ರಾಯಪಟ್ಟರು.

ವಿಶ್ವಕರ್ಮರು ಪ್ರಳಯದ ನಂತರವೂ ಹೊಸ ಸೃಷ್ಟಿಯ ಕಾರ್ಯಕ್ಕೆ ಕಾರಣವಾಗುವ ಶಕ್ತಿಯಾಗಿದ್ದಾರೆ ಎಂಬ ಪೌರಾಣಿಕ ನಂಬಿಕೆಯಿದೆ. ಸೂರ್ಯ, ಚಂದ್ರ, ನಕ್ಷತ್ರಗಳೂ ಇಲ್ಲದ ಶೂನ್ಯ ಸ್ಥಿತಿಯಿಂದ ಹೊಸ ಜಗತ್ತಿನ ನಿರ್ಮಾಣ ಆರಂಭವಾಗುತ್ತದೆ ಎಂಬ ಕಲ್ಪನೆಯಲ್ಲಿ ವಿಶ್ವಕರ್ಮರ ಸೃಷ್ಟಿಶಕ್ತಿಯನ್ನು ಗುರುತಿಸಲಾಗಿದೆ ಎಂದರು.

ಈ ಹಿನ್ನೆಲೆಯಲ್ಲಿ ವಿಶ್ವಕರ್ಮ ಜಯಂತಿಯ ಆಚರಣೆಯು ಕೇವಲ ಒಂದು ದಿನದ ಕಾರ್ಯಕ್ರಮವಾಗದೆ, ಕಾಯಕದ ಗೌರವ, ಕೌಶಲ್ಯದ ಮಹತ್ವ, ಸೃಜನಶೀಲತೆ ಹಾಗೂ ಸಮಾಜ ನಿರ್ಮಾಣದಲ್ಲಿ ವಿವಿಧ ವೃತ್ತಿಗಳ ಕೊಡುಗೆಯನ್ನು ಗೌರವಿಸುವ ಸಂದರ್ಭವಾಗಬೇಕು. ವಿಶ್ವಕರ್ಮ ತತ್ವವನ್ನು ಒಂದು ಸಮುದಾಯಕ್ಕೆ ಸೀಮಿತಗೊಳಿಸದೆ ಸಾರ್ವತ್ರಿಕ ಸೃಷ್ಟಿಶಕ್ತಿಯ ರೂಪದಲ್ಲಿ ಅರ್ಥೈಸಿಕೊಂಡು ಆರಾಧಿಸಬೇಕು ಎಂದು ಎಚ್.ಬಿ.ಲಿಂಗಮೂರ್ತಿ ಅವರು ಹೇಳಿದರು.

ವಿಶ್ವಕರ್ಮ ಸಮಾಜದ ಕೊಡಗು ಜಿಲ್ಲಾ ನಿರ್ದೇಶಕರಾದ ಕೆ.ಎಸ್.ಚಂದ್ರಶೇಖರ್ ಅವರು ಮಾತನಾಡಿ, ವಿಶ್ವಕರ್ಮ ಸಮುದಾಯವು ಉನ್ನತ ಮಟ್ಟಕ್ಕೆ ಬೆಳೆಯಬೇಕಾದರೆ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುವುದರ ಜೊತೆಗೆ ರಾಜಕೀಯವಾಗಿಯೂ ಪ್ರಬಲವಾಗಬೇಕು ಎಂದು ಕರೆ ನೀಡಿದರು.

ವಿಶ್ವಕರ್ಮ ಸಮುದಾಯದ ಅಭಿವೃದ್ಧಿಗೆ ಶಿಕ್ಷಣ ಪ್ರಮುಖ ಸಾಧನವಾಗಿದೆ. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಮೂಲಕ ಸಮಾಜವನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯುವ ಪ್ರಯತ್ನ ನಡೆಯಬೇಕು ಎಂದು ಅವರು ಹೇಳಿದರು.

ವಿಶ್ವಕರ್ಮ ಸಮುದಾಯದಲ್ಲಿ ಅಪಾರ ಜ್ಞಾನ ಮತ್ತು ಪ್ರತಿಭೆ ಇದೆ. ಪ್ರಪಂಚದ ಯಾವುದೇ ಕ್ಷೇತ್ರವನ್ನು ಗಮನಿಸಿದರೂ ಸಮುದಾಯದವರ ಬುದ್ಧಿವಂತಿಕೆ ಹಾಗೂ ಕೌಶಲ್ಯವನ್ನು ಗುರುತಿಸಬಹುದು. ಆದರೆ ಈ ಜ್ಞಾನ ಮತ್ತು ಪ್ರತಿಭೆಯನ್ನು ಸಮಾಜದ ಅಭಿವೃದ್ಧಿಗೆ ಸೂಕ್ತ ರೀತಿಯಲ್ಲಿ ಬಳಸಿಕೊಳ್ಳುವ ಅಗತ್ಯವಿದೆ ಎಂದು ಕೆ.ಎಸ್.ಚಂದ್ರಶೇಖರ್ ಅವರು ಅಭಿಪ್ರಾಯಪಟ್ಟರು.

ಸಮುದಾಯದ ಮುಖಂಡರು ಹಾಗೂ ಸದಸ್ಯರು ಪರಸ್ಪರ ಸಹಕಾರ ಮತ್ತು ಬೆಂಬಲದೊಂದಿಗೆ ಮುನ್ನಡೆಯಬೇಕು. ಒಬ್ಬರು ಅಭಿವೃದ್ಧಿ ಸಾಧಿಸಿದಾಗ ಮತ್ತೊಬ್ಬರು ಪ್ರೋತ್ಸಾಹಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಸಮಾಜದ ಅಭಿವೃದ್ಧಿಗೆ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆ ನೀಡಬೇಕು. ಸಮಾಜ ನನಗೇನು ಮಾಡಿದೆ ಎಂಬ ಪ್ರಶ್ನೆ ಕೇಳುವುದಕ್ಕಿಂತ ನಾನು ಸಮಾಜಕ್ಕೆ ಏನು ಮಾಡಿದ್ದೇನೆ ಎಂಬ ಪ್ರಶ್ನೆಯನ್ನು ಪ್ರತಿಯೊಬ್ಬರೂ ತಮ್ಮಲ್ಲಿ ಕೇಳಿಕೊಳ್ಳಬೇಕು. ಸಮಾಜದಿಂದ ಏನು ಪಡೆಯಬಹುದು ಎಂಬುದಕ್ಕಿಂತ ಸಮಾಜಕ್ಕೆ ತಾವು ಏನು ಕೊಡುಗೆ ನೀಡಬಹುದು ಎಂಬ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಶಿಕ್ಷಣ, ಸಂಘಟನೆ ಹಾಗೂ ಪರಸ್ಪರ ಸಹಕಾರದ ಮೂಲಕ ವಿಶ್ವಕರ್ಮ ಸಮುದಾಯವನ್ನು ಮತ್ತಷ್ಟು ಬಲಿ?ಗೊಳಿಸಲು ಪ್ರತಿಯೊಬ್ಬರೂ ಶ್ರಮಿಸಬೇಕು ಎಂದು ಅವರು ಹೇಳಿದರು.

ಕೊಡಗು ಜಿಲ್ಲಾ ವಿಶ್ವಕರ್ಮ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಬಿ.ಬಿ.ನಾಗರಾಜು ಅವರು ಮಾತನಾಡಿ, ಕೊಡಗು ಜಿಲ್ಲೆಯಲ್ಲಿ ವಿಶ್ವಕರ್ಮ ಸಮಾಜದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಪ್ರತಿಯೊಂದು ತಾಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಸದಸ್ಯತ್ವ ಅಭಿಯಾನ ನಡೆಸಿ ಹೆಚ್ಚಿನ ಸಂಖ್ಯೆಯಲ್ಲಿ ಸದಸ್ಯರನ್ನು ಸೇರ್ಪಡೆಗೊಳಿಸಬೇಕು ಎಂದು ಒತ್ತಾಯಿಸಿದರು.

ಬಿಜೆಪಿ ಪ್ರತಿಭಟನೆ ವಿರುದ್ಧ ಕಾಂಗ್ರೆಸ್ ಆಕ್ರೋಶ

ಮೈಸೂರು: ಟಿ.ನರಸೀಪುರದಲ್ಲಿ ಬಿಜೆಪಿಯವರು ಇನ್ಸ್ಪೆಕ್ಟರ್ ವಿರುದ್ಧ ನಡೆಸಿದ ಪ್ರತಿಭಟನೆ ಖಂಡಿಸಿ ಮೈಸೂರು ನಗರ (ಜಿಲ್ಲಾ) ಕಾಂಗ್ರೆಸ್ ಸಮಿತಿ ವತಿಯಿಂದ ಜಿಲ್ಲಾ ಪಂಚಾಯತ್ ಮುಂಭಾಗ ಪ್ರತಿಭಟನೆ ನಡೆಸಲಾಯಿತು. ಪ್ರತಾಪ್ ಸಿಂಹ ಮತ್ತು ಆರ್.ಅಶೋಕ್ ಡೋಂಗಿ ಹಿಂದುತ್ವವಾದಿಗಳು. ಟಿ.ನರಸೀಪುರ ದಲ್ಲಿ ಬಿಜೆಪಿ ನಾಯಕರು ಪೊಲೀಸ್ ಅಧಿಕಾರಿಯ ವಿರುದ್ಧ ನಡೆಸಿದ ಪ್ರತಿಭಟನೆಯಲ್ಲಿ ಗಣೇಶ ವಿಗ್ರಹವನ್ನು ಶೂ ಧರಿಸಿ ಕೈಯಲ್ಲಿ ಹಿಡಿದುಕೊಂಡಿರುವುದು ಖಂಡನೀಯ. ತಮ್ಮನ್ನು ಹಿಂದೂ ಧರ್ಮದ ರಕ್ಷಕರು ಎಂದ

ಸಿನಿಮಾ ವರದಿ: ಬಿ.ಜಿ.ರವಿಕುಮಾರ್

ಸರ್ಚ್ ಚಿತ್ರಕ್ಕೆ ಕ್ಯಾಮರಾ ಆನ್ ಮಾಡಿದ ಶ್ರೀನಗರ ಕಿಟ್ಟಿ

ನಿರ್ದೇಶಕ ಎಸ್.ನಾರಾಯಣ್ ಪುತ್ರ ಪಂಕಜ್ ನಾರಾಯಣ್ ಸಸ್ಪೆನ್ಸ್ ಥ್ರಿಲ್ಲರ್ ಚಿತ್ರದೊಂದಿಗೆ ಮರಳಿದ್ದಾರೆ. ಸರ್ಚ್ ಹೆಸರಿನ ಈ ಚಿತ್ರದ ಮುಹೂರ್ತ ಸಮಾರಂಭ ನೆರವೇರಿದೆ.

ಚಿತ್ರದ ನಾಯಕ ಪಂಕಜ್ ಮಾತನಾಡಿ, "ಉಗ್ರಂ ಮುರಳಿ ಅವರು ಈಗಾಗಲೇ ಚಿತ್ರದ ಟೈಟಲ್ ಲಾಂಚ್ ಮಾಡಿಕೊಟ್ಟರು. ಇದೀಗ ಗಣ್ಯರ ಸಮ್ಮುಖದಲ್ಲಿ ಮುಹೂರ್ತ ನೆರವೇರಿದೆ. ಮೊದಲನೆಯದಾಗಿ ಕಥೆಯೇ ನಾನು ಈ ಚಿತ್ರ ಒಪ್ಪಲು ಪ್ರಮುಖ ಕಾರಣ. ಇದು ಒಂದೇ ವಿಷಯವನ್ನು ತಲೆಯಲ್ಲಿಟ್ಟುಕೊಂಡು ಚಾಲೆಂಜ್ ಆಗಿ ಹುಡುಕಾಟ ನಡೆಸುವ ವಿಭಿನ್ನ ವ್ಯಕ್ತಿಯ ಪಾತ್ರ. ಗ್ಯಾಪ್ ಬಳಿಕ ಚಿತ್ರ ಮಾಡುತ್ತಿರುವುದೇನೋ ನಿಜ. ನಮ್ಮ ತಂದೆಯ ಮಾತಿನಂತೆ ಪ್ರತಿ ಸಿನಿಮಾಗಾಗಿ ಕೂಡ ನಾನು ಸಮರ್ಪಣಾಭಾವದಿಂದ ಕೆಲಸ ಮಾಡುತ್ತೇನೆ. ಆದರೆ ಈ ಬಾರಿ ಈ ಹಿಂದೆಂದೂ ಮಾಡಿರದಂಥ ಪಾತ್ರ ಲಭಿಸಿರುವುದು ಮಾತ್ರ ನಿಜ. ಅದರಲ್ಲೂ ನಿರ್ದೇಶಕ ರಮೇಶ್ ಅವರು ಕಲಾವಿದರಿಂದ ಇದೇ ಬೇಕು ಹೇಳಿ ಕೆಲಸ ತೆಗೆಯಬಲ್ಲವರು. ಹಾಗಾಗಿ ಸಹಜವಾಗಿಯೇ ನಿರೀಕ್ಷೆಗಳಿವೆ ಎಂದರು ರಮೇಶ್ ನಿರ್ದೇಶನದ ಪ್ರಥಮ ಚಿತ್ರ ಇದು.

ಚಿತ್ರದ ಬಗ್ಗೆ ಮಾಹಿತಿ ನೀಡಿದ ಅವರು, ಇದು ಒಂದು ರಾತ್ರಿಯಲ್ಲಿ ನಡೆಯುವ ಕಥೆ. ಅದನ್ನು 25 ರಾತ್ರಿಗಳಲ್ಲಿ ಚಿತ್ರೀಕರಿಸಲಿದ್ದೇವೆ.

ಚಿತ್ರವನ್ನು ಹುಬ್ಬಳ್ಳಿ ಭಾಷೆಯಲ್ಲಿ ಹುಬ್ಬಳ್ಳಿ ಚೆನ್ನಮ್ಮ ಸರ್ಕಲ್‌ನಲ್ಲೇ ಚಿತ್ರೀಕರಿಸುವ ಯೋಜನೆ ಇತ್ತು. ಆದರೆ ಅಲ್ಲಿಗೆ ಹೋಗಿ ನೋಡಿದಾಗ ಜಾಗ ತುಂಬ ಬದಲಾಗಿತ್ತು. ಹಾಗಾಗಿ ಬೆಂಗಳೂರಲ್ಲೇ ಸರ್ಕಲ್ ಸೆಟ್ ಹಾಕಿ, ಬೆಂಗಳೂರಿನ ಕಥೆಯಾಗಿ ಚಿತ್ರ ಮಾಡಲಿದ್ದೇವೆ ಎಂದರು. ಚಿತ್ರದಲ್ಲಿ ನಾಯಕನ ಕಣ್ಣಮುಂದೆಯೇ ಮಿಸ್ ಆಗುವ ಹುಡುಗಿಯ ಹುಡುಕಾಟವಿದೆ. ಇದೇ ಸಂದರ್ಭದಲ್ಲಿ ಮತ್ತಂದೆಡೆ ಸಾಫ್ಟ್ ವೇರ್ ಹುಡುಗನ ಲಗೇಜ್, ಲ್ಯಾಪ್‌ಟಾಪ್ ಹುಡುಕಾಟವೂ ನಡೆದಿರುತ್ತದೆ. ಸಿನಿಮಾ ಪ್ರೇಕ್ಷಕರನ್ನು ಕುತೂಹಲದಿಂದ ನೋಡಿಸಿಕೊಂಡು ಹೋಗುತ್ತದೆ ಎಂದರು.

ಸರ್ಚ್ ನಲ್ಲಿ ಪಂಕಜ್ ಅವರ ಜೋಡಿಯಾಗಿ ನಟಿಸುತ್ತಿರುವುದು ಧಾಮಿನಿ. ನನ್ನದು ಮೂಲತಃ ಕೊಡಗು. ಪ್ರಸ್ತುತ 'ಮಾಂಗಲ್ಯ' ಧಾರಾವಾಹಿಯಲ್ಲಿ ನಟಿಸುತ್ತಿದ್ದೇನೆ ಎಂದರು.ನಟಿ ಕೃತ್ತಿಕಾ ಗೌಡ ಮಾತನಾಡಿ, ಈ ಚಿತ್ರದಲ್ಲಿನ ಪ್ರತಿಯೊಂದು ಪಾತ್ರವೂ ನನ್ನ ಪಾತ್ರದ ಸುತ್ತವೇ ಸುತ್ತುತ್ತಿರುತ್ತದೆ. ಅದರ ಕಾರಣ ತಿಳಿಯಬೇಕಾದರೆ ನೀವು ಸಿನಿಮಾ ನೋಡಬೇಕು. ನಿರ್ದೇಶಕ ರಮೇಶ್ ರಿಂದಾಗಿ ಸರ್ಚ್ ನಲ್ಲಿ ಪ್ರಧಾನ ಪಾತ್ರ ದೊರಕಿರುವುದು ಖುಷಿಯಾಗಿದೆ ಎಂದರು.

ಈ ಹಿಂದೆ ಸಣ್ಣ ಪುಟ್ಟ ಪಾತ್ರದಲ್ಲಿ ನಟಿಸಿದ್ದ ಸುಭಾನ್ ಅವರು ಈ ಚಿತ್ರದ ಸಹನಿರ್ಮಾಪಕರೂ ಹೌದು.ನಾಗೇಂದ್ರ ಪ್ರಸಾದ್ ಕ್ಲಾಪ್ ಮಾಡಿದರು. ಕ್ಯಾಮರಾ ಆನ್ ಮಾಡಿದ ನಟ ಶ್ರೀನಗರ ಕಿಟ್ಟಿ, ಶುಭ ಕೋರಿದರು. ಚಿತ್ರದ ನಿರ್ಮಾಪಕ ಯೋಗೇಶ್ ಕಂಟ್ರಾಕ್ಟರ್. ಚಿತ್ರ ಒಳ್ಳೆಯ ಕಥಾವಸ್ತು ಹೊಂದಿದೆ. ಕಥೆ ಕೇಳಿದಾಗ ಖುಷಿ ಆಯಿತು.

ವೈಟ್‌ಫೀಲ್ಡ್‌ನಲ್ಲಿ ಕಲರ್ಸ್ ಹೆಲ್ತ್‌ಕೇರ್ ಇಂಡಿಯಾ ಉದ್ಘಾಟನೆ!

ದೇಶದ ಪ್ರಮುಖ ಆರೋಗ್ಯ ಮತ್ತು ಸೌಂದರ್ಯವರ್ಧಕ ಸಂಸ್ಥೆಗಳಲ್ಲಿ ಒಂದಾದ ಕಲರ್ಸ್ ಹೆಲ್ತ್ ಕೇರ್ ಇಂಡಿಯಾ ಸಂಸ್ಥೆಯ ನೂತನ ವೆಲ್‌ನೆಸ್ ಮತ್ತು ಫಿಟ್‌ನೆಸ್ ಕೇಂದ್ರವನ್ನು ವೈಟ್ ಫೀಲ್ಡ್ ನಲ್ಲಿ ತಾರಾ ದಂಪತಿ ನಟ ಡಾರ್ಲಿಂಗ್ ಕೃಷ್ಣ ಹಾಗೂ ನಟಿ ಮಿಲನಾ ನಾಗರಾಜ್ ಉದ್ಘಾಟಿಸಿದರು.

ತಮ್ಮ ಹೈಸ್ಕೂಲ್ ದಿನಗಳ ಅನುಭವ ಮೆಲುಕು ಹಾಕಿದ ಡಾರ್ಲಿಂಗ್ ಕೃಷ್ಣ ತುಂಬಾ ತೆಳ್ಳಗಿದ್ದ ಕಾರಣ ಹುಡುಗಿಯರ ಗಮನ ಸೆಳೆಯಲು ಮತ್ತು ಧರಿಸುವ ಉಡುಪುಗಳು ಮೈಕಟ್ಟಿಗೆ ಸರಿಯಾಗಿ ಹೊಂದಿಕೊಳ್ಳಬೇಕೆಂಬ ಆಸೆಯಿಂದ ವರ್ಕೌಟ್ ಆರಂಭಿಸಿದ್ದಾಗಿ ತಮಾಷೆಯಾಗಿ ನೆನಪಿಸಿಕೊಂಡರು.

ನಟಿ ಮಿಲನಾ ನಾಗರಾಜ್ ತಮ್ಮ ಸೌಂದರ್ಯ ಹಾಗೂ ಆರೋಗ್ಯದ ಗುಟ್ಟನ್ನು ಬಿಚ್ಚಿಡುತ್ತಾ, ತಾವು ಕಳೆದ ಎರಡೂವರೆ ದಶಕಗಳಿಂದ ಕ್ರೀಡಾಪಟು ಮತ್ತು ಈಜುಗಾರ್ತಿಯಾಗಿದ್ದ ಕಾರಣ ನಿರಂತರವಾಗಿ ಕ್ರಿಯಾಶೀಲವಾಗಿರುವುದೇ ತಮ್ಮ ಫಿಟ್‌ನೆಸ್‌ಗೆ ಕಾರಣ ಎಂದರು. ನಿಯಮಿತ ಜಿಮ್, ಯೋಗ ಮತ್ತು ಈಜಿನ ಜೊತೆಗೆ ಪ್ರಸ್ತುತ ನಿತ್ಯ 10 ಸಾವಿರ ಹೆಜ್ಜೆ ನಡೆಯುವ ಅಗತ್ಯತೆಗಳು ಹೆಚ್ಚುತ್ತಿವೆ. ಇದನ್ನು ಗಮನದಲ್ಲಿಟ್ಟುಕೊಂಡು ಸ್ಥಳೀಯ ಸಮುದಾಯಕ್ಕೆ ಉತ್ಕೃಷ್ಟ ಮಟ್ಟದ ವೆಲ್‌ನೆಸ್ ಸೇವೆಗಳನ್ನು ನೀಡುವ ಸಲುವಾಗಿ ವೈಟ್‌ಫೀಲ್ಡ್‌ನಲ್ಲಿ ಅತ್ಯಾಧುನಿಕ ಸೌಲಭ್ಯಗಳೊಂದಿಗೆ ಈ ನೂತನ ಕೇಂದ್ರವನ್ನು ತೆರೆಯಲಾಗಿದೆ ಎಂದರು. ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕ ವೆಂಕಟ ಶಿವಾಜಿ ಕೂನಾ ಮಾತನಾಡಿ ಬೆಂಗಳೂರಿನಲ್ಲಿ ಸಂಸ್ಥೆ ಬಹು ವರ್ಷದಿಂದ ಕಾರ್ಯನಿರ್ವಹಿಸುತ್ತಿದೆ ಎಂದರು ಸಂಸ್ಥೆಯ ಆಪರೇಷನ್ ಡೈರೆಕ್ಟರ್ ಕೃಷ್ಣರಾಜ್ ತುಮ್ಮಾಲ ಅವರು, ಗ್ರಾಹಕರ ಹೆಚ್ಚುತ್ತಿರುವ ಬೇಡಿಕೆಗೆ ತಕ್ಕಂತೆ ವೈಟ್‌ಫೀಲ್ಡ್‌ನಲ್ಲಿ ಈ ನೂತನ ಶಾಖೆಯನ್ನು ಆರಂಭಿಸಲಾಗಿದೆ ಎಂದು ತಿಳಿಸಿದರು.

ಬೇಲ್ ಚಿತ್ರದ ಕುಮಾರಿ ಸ್ಪೆಷಲ್ ಸಾಂಗ್ ಔಟ್

ಬೇಲ್ ಸಿನಿಮಾದ ಸ್ಪೆಷಲ್ ಹಾಡು ಕುಮಾರಿ ಬಿಡುಗಡೆಯಾಗಿದೆ. ಸೆನ್ಸೇಷನ್ ಹಾಗೂ ನಟಿ ನಿವೇದಿತಾ ಗೌಡ ತಮ್ಮ ಮೋಹಕ ಮೈಮಾಟ ಮತ್ತು ಸಖತ್ ಸ್ಟೆಪ್ಸ್‌ಗಳ ಮೂಲಕ ಪಡ್ಡೆಹೈಕ್ಳ ದಿಲ್ ಗೆದ್ದಿದ್ದಾರೆ.

ಶೂಟಿಂಗ್ ಹಿನ್ನೆಲೆಯಲ್ಲಿ ಬರುವಂತಹ ಈ ಕಲರ್‌ಫುಲ್ ಡ್ಯಾನ್ಸ್ ನಂಬರ್‌ನಲ್ಲಿ ನಿವೇದಿತಾ ಗೌಡ ಜೊತೆಗೆ ನಟ ಲೂಸ್ ಮಾದ ಯೋಗಿ ಹೆಜ್ಜೆ ಹಾಕಿದ್ದಾರೆ. ಯೋಗಿ ಮತ್ತು ನಿವೇದಿತಾ ಅವರ ಡ್ಯಾನ್ಸ್ ಕೆಮಿಸ್ಟ್ರಿ ಹಾಗೂ ಆಕರ್ಷಕ ಮೂವ್ಸ್‌ಗಳಿಗೆ ಚಪ್ಪಾಳೆ ಸಿಕ್ಕಿದೆ.

ಸಂಗೀತ ನಿರ್ದೇಶಕ ಬಿ. ಅಜನೀಶ್ ಲೋಕನಾಥ್ ಅವರ ಟ್ರೆಂಡಿ ಬೀಟ್ಸ್‌ಗೆ ನಿರ್ದೇಶಕ ಪವನ್ ಒಡೆಯರ್ ಸಾಹಿತ್ಯ ಬರೆದಿದ್ದು, ಮಂಗ್ಲಿ ಜಂಟಿಯಾಗಿ ಹಾಡಿಗೆ ಹುರುಪು ತುಂಬಿದ್ದಾರೆ. ನಿರ್ಮಾಪಕ ವೆಂಕಟ್ ಕೆ. ನಾರಾಯಣ ಚಿತ್ರ ನಿರ್ಮಿಸಿದ್ದಾರೆ. ಕಥೆ, ಚಿತ್ರಕಥೆ, ಸಂಭಾಷಣೆ ಹಾಗೂ ನಿರ್ದೇಶನ ಪವನ್ ಒಡೆಯರ್.

ಚಿತ್ರದಲ್ಲಿ ಶಿವರಾಜ್‌ಕುಮಾರ್, ಸಾಯಿಕುಮಾರ್, ಮಲಯಾಳಂ ಖ್ಯಾತ ನಟ ಜಯರಾಮ್, ಲೂಸ್ ಮಾದ ಯೋಗಿ, ದೀಕ್ಷಿತ್ ಶೆಟ್ಟಿ ಹಾಗೂ ಸಂಜನಾ ಆನಂದ್ ಮುಂತಾದವರ ತಾರಾಗಣವಿದೆ. ಚಿತ್ರ ಅಕ್ಟೋಬರ್ 2 ಕ್ಕೆ ಬಿಡುಗಡೆ ಆಗಲಿದೆ.

ಭರ್ಜರಿಯಾಗಿ ಹೆಜ್ಜೆ ಹಾಕಿ ಪಡ್ಡೆಹೈಕ್ಳ ನಿದ್ದೆಗೆಡಿಸಿದ ನಿವೇದಿತಾ ಗೌಡ!

ನ್ಯಾಷನಲ್ ಪೊಲ್ಯೂಷನ್ ಕಂಟ್ರೋಲ್ ಎನ್ವಿರಾನ್‌ಮೆಂಟ್ ಕನ್ಸರ್ವೇಷನ್ ಕಮಿಟಿ ವತಿಯಿಂದ ನೀಡಲಾಗುವ ಸರ್ ಎಂ. ವಿಶ್ವೇಶ್ವರಯ್ಯ ವರ್ಲ್ಡ್ ಓಝೋನ್ ಇಂಟರ್‌ನ್ಯಾಷನಲ್ ಎನ್‌ವಿ ಫೆಸ್ಟ್ ಅವಾರ್ಡ್ 2026 ಪುರಸ್ಕಾರಕ್ಕೆ ನಟ ನಿರ್ದೇಶಕ ಅನಿರುದ್ದ್ ಜಟ್ಕರ್ ಭಾಗಿ ಆಗಿದ್ದಾರೆ.

ಪರಿಸರ ಸಂರಕ್ಷಣೆ ಮತ್ತು ಮಾಲಿನ್ಯ ನಿಯಂತ್ರಣದ ಕ್ಷೇತ್ರದಲ್ಲಿ ನೀಡಲಾಗುತ್ತಿರುವ ಈ ಗೌರವ ಕಲಾವಿದ ರಾಗಿ ಪರಿಸರ ಸಂರಕ್ಷಣೆಗೆ ಶ್ರಮಿಸುತ್ತಿರುವ ಅನಿರುದ್ದ್ ಅವರಿಗೆ ಸಂದಿದೆ.

ಗಣಪತಿ ಬಪ್ಪ ಮೋರಿಯಾ

ಚಿತ್ರದ ಟೈಟಲ್, ಫಸ್ಟ್ ಲುಕ್ ಪೋಸ್ಟರ್ ಅನಾವರಣ

ಗಣಪತಿ ಬಪ್ಪ ಮೋರಿಯಾ ಶೀರ್ಷಿಕೆ ಇಡಲಾಗಿರುವ ಚಿತ್ರದ ಟೈಟಲ್ ಜೊತೆಗೆ ಆಕರ್ಷಕ ಫಸ್ಟ್ ಲುಕ್ ಮೋಷನ್ ಪೋಸ್ಟರ್ ಅನ್ನು ಬಿಡುಗಡೆ ಮಾಡಲಾಗಿದೆ. ಈ ಚಿತ್ರವು ಪೊಲಿಟಿಕಲ್ ಥ್ರಿಲ್ಲರ್ ಜಾನರ್‌ನಲ್ಲಿ ಮೂಡಿಬರಲಿದೆ. ಈಗಾಗಲೇ ಚಿತ್ರದ ಮೊದಲ ಹಂತದ ಚಿತ್ರೀಕರಣ ಯಶಸ್ವಿಯಾಗಿ ಪೂರ್ಣಗೊಂಡಿದ್ದು, ಮುಂದಿನ ತಿಂಗಳಿಂದ ಎರಡನೇ ಹಂತದ ಶೂಟಿಂಗ್ ಸಾಗಲಿದೆ.

ಚಿತ್ರದಲ್ಲಿ ಸೂರಜ್ ಮುಖ್ಯ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಚಿತ್ರದ ನಾಯಕಿಯಾಗಿ ತೆಲುಗು ನಟಿ ಬಾಂಧವಿ ಶ್ರೀಧರ್ ಬಣ್ಣ ಹಚ್ಚಿದ್ದಾರೆ. ಇವರ ಜೊತೆಗೆ ಆಡಿಷನ್ ಮೂಲಕ ರಾಜ್ಯಾದ್ಯಂತ ಆಯ್ಕೆಯಾದ ಹಲವು ಹೊಸ ಪ್ರತಿಭೆಗಳಿಗೂ ಚಿತ್ರದಲ್ಲಿ ಅವಕಾಶ ನೀಡಲಾಗಿದೆ. ಚಿತ್ರಕ್ಕೆ ಬಲಿಷ್ಠ ತಾಂತ್ರಿಕ ತಂಡದ ಸಾಥ್ ಸಿಕ್ಕಿದ್ದು, ಹೊಸ ಪ್ರತಿಭೆ ಸಂಜಯ್ ಕೆ. ಕೆ. ಅವರು ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ಪ್ರಸನ್ನ ಸಂಭಾಷಣೆ, ಮಿಥುನ್ ಮುಕುಂದನ್ ಸಂಗೀತ ಸಂಯೋಜನೆ, ಆನಂದ್ ಮೀನಾಕ್ಷಿ ಛಾಯಾಗ್ರಹಣ ನಿರ್ವಹಿಸುತ್ತಿದ್ದಾರೆ. ಲಾರೆನ್ಸ್ ಜೋಸೆಫ್ ನಿರ್ಮಿಸುತ್ತಿದ್ದಾರೆ.

‘ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಸೂಪರ್ ಮಾಮ್’ ಶೋ ಜೀ ನಲ್ಲಿ ಆರಂಭ

ಜೀ ಕನ್ನಡ ಕರ್ನಾಟಕದ ತಾಯಂದಿರ ನೃತ್ಯ ಪ್ರತಿಭೆ ಮತ್ತು ಕನಸುಗಳಿಗೆ ಹೊಸ ರೆಕ್ಕೆ ನೀಡಲು ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಸೂಪರ್ ಮಾಮ್ ರಿಯಾಲಿಟಿ ಶೋನೊಂದಿಗೆ ಮತ್ತೊಮ್ಮೆ ವೀಕ್ಷಕರ ಮನೆಮನ ತಲುಪಲು ಸಜ್ಜಾಗಿದೆ.

ಸೆಪ್ಟೆಂಬರ್ 12ರಿಂದ ಪ್ರತಿ ಶನಿವಾರ ಮತ್ತು ಭಾನುವಾರ ರಾತ್ರಿ 7:30ಕ್ಕೆ ಈ ಕಾರ್ಯಕ್ರಮ ಪ್ರಸಾರವಾಗುತ್ತಿದೆ ಕುಟುಂಬ, ಉದ್ಯೋಗ ಹಾಗೂ ದಿನನಿತ್ಯದ ನೂರಾರು ಜವಾಬ್ದಾರಿಗಳ ನಡುವೆಯೂ ತಮ್ಮ ಆಸಕ್ತಿ ಮತ್ತು ನೃತ್ಯದ ಮೇಲಿನ ಪ್ರೀತಿಯನ್ನು ಜೀವಂತವಾಗಿರಿಸಿಕೊಂಡಿರುವ ಸ್ಫೂರ್ತಿದಾಯಕ ಅಮ್ಮಂದಿರ ಕಥೆಗಳೇ ಈ ಶೋನ ಪ್ರಮುಖ ಆಕರ್ಷಣೆಯಾಗಲಿವೆ.

ಅಮ್ಮಂದಿರು ತಮ್ಮ ಜೀವನದ ಬಹುಪಾಲು ಸಮಯವನ್ನು ಕುಟುಂಬ ಮತ್ತು ಮನೆಗಾಗಿ ಮುಡಿಪಾಗಿಡುತ್ತಾರೆ. ಈ ಜವಾಬ್ದಾರಿಗಳ ನಡುವೆ ಅವರ ಸ್ವಂತ ಆಸೆ–ಆಕಾಂಕ್ಷೆಗಳು ಮತ್ತು ಕನಸುಗಳು ಕೆಲವೊಮ್ಮೆ ಹಿಂದೆ ಸರಿಯುತ್ತವೆ. ಅಂತಹ ತಾಯಂದಿರಿಗೆ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಸೂಪರ್ ಮಾಮ್ ತಮ್ಮ ನೃತ್ಯದ ಮೇಲಿನ ಪ್ರೀತಿಯನ್ನು ಮತ್ತೊಮ್ಮೆ ಕಂಡುಕೊಳ್ಳಲು ಹಾಗೂ ತಮ್ಮ ಪ್ರತಿಭೆಯನ್ನು ಅನಾವರಣಗೊಳಿಸಲು ಒಂದು ಉತ್ತಮ ವೇದಿಕೆಯಾಗಲಿದೆ. ವರ್ಷಗಳಿಂದ ಬದಿಗೊತ್ತಿದ್ದ ಕನಸುಗಳಿಗೆ ಮರುಜೀವ ನೀಡುವುದರ ಜೊತೆಗೆ, ತಮ್ಮ ಪ್ರತಿಭೆ ಮತ್ತು ಆತ್ಮವಿಶ್ವಾಸವನ್ನು ಮತ್ತೊಮ್ಮೆ ಪ್ರದರ್ಶಿಸಲು ಈ ರಿಯಾಲಿಟಿ ಶೋ ತಾಯಂದಿರಿಗೆ ಅವಕಾಶ ಕಲ್ಪಿಸುತ್ತಿದೆ.

ಆಡಿಷನ್ ಸಂಚಿಕೆಗಳಲ್ಲಿ ಕರ್ನಾಟಕದ ವಿವಿಧ ಭಾಗಗಳಿಂದ ಆಗಮಿಸಿರುವ ತಾಯಂದಿರನ್ನು ವೀಕ್ಷಕರಿಗೆ ಪರಿಚಯಿಸಲಾಗುತ್ತದೆ. ನೃತ್ಯದ ಮೇಲಿನ ತಮ್ಮ ಆಸಕ್ತಿ ಮತ್ತು ಪ್ರತಿಭೆಯನ್ನು ವೇದಿಕೆಯಲ್ಲಿ ಪ್ರದರ್ಶಿಸಲಿರುವ ಈ ತಾಯಂದಿರು, ತಮ್ಮ ವೈಯಕ್ತಿಕ ಬದುಕಿನ ಪಯಣ, ಕನಸುಗಳು ಹಾಗೂ ಆಕಾಂಕ್ಷೆಗಳನ್ನೂ ಹಂಚಿಕೊಳ್ಳಲಿದ್ದಾರೆ. ಕುಟುಂಬ ಮತ್ತು ಇತರ ಜವಾಬ್ದಾರಿಗಳ ನಡುವೆ ತಮ್ಮ ಕನಸುಗಳಿಗೆ ಮತ್ತೊಮ್ಮೆ ಆದ್ಯತೆ ನೀಡುವ ಅವರ ಪ್ರಯತ್ನಗಳು ಕಾರ್ಯಕ್ರಮದ ಪ್ರಮುಖ ಹೈಲೈಟ್‌ಗಳಾಗಲಿವೆ. ಪ್ರತಿಯೊಬ್ಬ ಸ್ಪರ್ಧಿಯೂ ತನ್ನದೇ ಆದ ಕಥೆ ಮತ್ತು ನೃತ್ಯ ಶೈಲಿಯೊಂದಿಗೆ ವೇದಿಕೆಯೇರಲಿದ್ದು, ಅವರ ವೈವಿಧ್ಯಮಯ ಪ್ರದರ್ಶನಗಳು ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಸೂಪರ್ ಮಾಮ್ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಲಿವೆ.

ಮೆಲ್ಬೋರ್ನ್ ಫಿಲಂ ಫೆಸ್ಟಿವಲ್‌ಗೆ ಆಯ್ಕೆಯಾದ ಪುಟ್ಟಣ್ಣನ ಕತ್ತೆ!

ಅತ್ಯಂತ ಸೂಕ್ಷ್ಮ ಕಥಾನಕಗಳ ಮೂಲಕವೇ ನಿರ್ದೇಶಕರಾಗಿ ನೆಲೆ ಕಂಡುಕೊಂಡಿರುವ ಸಿದ್ದು ಪೂರ್ಣಚಂದ್ರ ಇದೀಗ 'ಪುಟ್ಟಣ್ಣನ ಕತ್ತೆ' ಎಂಬ ಚಿತ್ರದ ಮೂಲಕ ಮತ್ತೆ ಪ್ರೇಕ್ಷಕರನ್ನು ಮುಖಾಮುಖಿಯಾಗುವ ಸನ್ನಾಹದಲ್ಲಿದ್ದಾರೆ. ಈ ಚಿತ್ರವೀಗ ಪ್ರತಿಷ್ಠಿತ ಮೆಲ್ಬೋರ್ನ್ ಫಿಲಂ ಫೆಸ್ಟಿವಲ್‌ಗೆ ಆಯ್ಕೆಯಾಗಿದೆ. ಆಸ್ಟ್ರೇಲಿಯಾದ ಮೆಲ್ಬೋರ್ನ್‌ನಲ್ಲಿ ನಡೆಯಲಿರುವ ಈ ಸಿನಿಮೋತ್ಸವದಲ್ಲಿ ವಿಶಿಷ್ಟ ಕಥೆ ಹೊಂದಿರೋ ಪುಟ್ಟಣ್ಣನ ಕತ್ತೆ ಚಿತ್ರ ಪ್ರದರ್ಶನಗೊಳ್ಳಲಿದೆ.

ಮೆಲ್ಬೋರ್ನ್ ಫಿಲಂ ಫೆಸ್ಟಿವಲ್‌ಗೆ ಜಾಗತಿಕ ಮಟ್ಟದಲ್ಲಿ ಘನತೆ ಗೌರವಗಳಿವೆ. ಆ ಸಿನಿಮೋತ್ಸವದಲ್ಲಿ ಸಿನಿಮಾವೊಂದು ಆಯ್ಕೆಯಾಗೋದೇ ಪ್ರಶಸ್ತಿಗೆ ಸಮ ಎಂಬಂಥಾ ವಾತಾವರಣವೂ ಇದೆ. ಯಾಕೆಂದರೆ, ಜಾಗತಿಕ ಮಟ್ಟದ ತುರುಸಿನ ಸ್ಪರ್ಧೆ ದಾಟಿಕೊಂಡು ಆಯ್ಕೆಯಾಗೋದು ಗುಣಮಟ್ಟದ ಕಂಟೆಂಟು ಹೊಂದಿದ್ದರೆ ಮಾತ್ರವೇ ಸಾಧ್ಯವಾಗುವ ಸಂಗತಿ. ಈ ನಿಟ್ಟಿನಲ್ಲಿ ಕನ್ನಡ ಸಿನಿಮಾ ಪುಟ್ಟಣ್ಣನ ಕತ್ತೆ ಈ ಸಿನಿಮೋತ್ಸವಕ್ಕೆ ಆಯ್ಕೆಯಾಗಿರುವುದು ಕನ್ನಡ ಚಿತ್ರರಂಗಕ್ಕೂ ಹೆಮ್ಮೆ ತರುವ ವಿಚಾರ.

ಕನ್ನಡದ ಮಟ್ಟಿಗೆ ಕತ್ತೆಯೊಂದನ್ನು ಕೇಂದ್ರವಾಗಿಟ್ಟುಕೊಂಡು ರೂಪುಗೊಂಡ ಮೊದಲ ಚಿತ್ರವೆಂಬ ಹೆಗ್ಗಳಿಕೆಗೂ ಪುಟ್ಟಣ್ಣನ ಕತ್ತೆ ಚಿತ್ರ ಪಾತ್ರವಾಗುತ್ತದೆ. ಬೆಂಗಳೂರಿನಂಥಾ ನಗರಗಳಲ್ಲಿ ಕತ್ತೆ ಹಾಲು ಮಾರುವವರು ಆಗಾಗ ಕಾಣಿಸಿಕೊಳ್ಳುತ್ತಾರೆ. ಅದ್ಯಾವುದೋ ಹಳ್ಳಿಯೊಂದರಿಂದ ಹಾಗೆ ಕತ್ತೆಯೊಂದಿಗೆ ಪಟ್ಟಣ ಸೇರಿಕೊಂಡವನ ಸುತ್ತ ಘಟಿಸುವ ಆಸಕ್ತಿದಾಯಕ ಕಥೆ ಈ ಸಿನಿಮಾದ ಆಂತರ್ಯದಲ್ಲಿದೆ. ಭೀಮೇಶ್ ಗೌಡ ಈ ಕಥನದ ಆತ್ಮದಂಥಾ ಪುಟ್ಟಣ್ಣನ ಪಾತ್ರಕ್ಕೆ ಜೀವ ತುಂಬಿದ್ದಾರೆ. ಅನೀಶ್ ಆರ್ಯನ್ ಈ ಸಿನಿಮಾದ ನಾಯಕನಾಗಿ, ಸಂಕೀರ್ಣವಾದೊಂದು ಪಾತ್ರದಲ್ಲಿ ನಟಿಸಿದ್ದಾರೆ.

ಪೂರ್ಣಚಂದ್ರ ಫಿಲಂಸ್ ಬ್ಯಾನರಿನಡಿಯಲ್ಲಿ ತನ್ಮಯ್ ಎಸ್ ಗೌಡ ನಿರ್ಮಾಣ ಮಾಡಿರುವ, ಸಿದ್ದು ಪೂರ್ಣಚಂದ್ರ ಕಥೆ ಚಿತ್ರಕಥೆ, ಸಂಭಾಷಣೆಯೊಂದಿಗೆ ನಿರ್ದೇಶನ ಮಾಡಿರುವ ಈ ಚಿತ್ರದಲ್ಲಿ ಅನೀಶ್ ಆರ್ಯನ್, ಭೀಮೇಶ್ ಗೌಡ, ಎನ್.ಟಿ ರಾಮಸ್ವಾಮಿ, ಕವಿತಾ ಕಂಬಾರ್, ವಿಭಾ, ಕಲಾರತಿ ಮಹದೇವ್, ರೋಹಿಣಿ, ರಶ್ಮಿ ಮೈಸೂರ್, ಲಕ್ಕಿ ಶಂಕರ್, ವಾಸು, ರಾಕಿ, ಮಂಡ್ಯ ಸಿದ್ದು ಮುಂತಾದವರ ತಾರಾಗಣವಿದೆ. ರಾಜು ಹೆಮ್ಮಿಗೆಪುರ ಛಾಯಾಗ್ರಹಣ, ಅನಂತ್ ಆರ್ಯನ್ ಸಂಗೀತ ನಿರ್ದೇಶನ, ದೀಪು ಸಿ.ಎಸ್ ಸಂಕಲನ ಈ ಚಿತ್ರಕ್ಕಿದೆ.

'ಕನಸಲು..' ಆಲ್ಬಮ್ ಹಾಡು ಬಿಡುಗಡೆ

ನವಿರಾದ ಪ್ರೇಮವನ್ನು ಸಾರುವ ಆಲ್ಬಮ್ ಗೀತೆಯೊಂದು 'ಕನಸಲು..' ಹೆಸರಲ್ಲಿ ಬಿಡುಗಡೆಯಾಗಿದೆ. ಯುವ ಪ್ರತಿಭೆ ಶ್ರೀರಾಮ್ ಗಂಧರ್ವ ಸಾರ